ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 73 | ರಾಯಚೂರು Raichur | 05-09-2026 | ಶನಿವಾರ Saturday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685




# ಬುಡ್ಗಾಮ್ ಅರಣ್ಯ ಪ್ರದೇಶದಲ್ಲಿ ಎನ್‌ಕೌಂಟರ್: ಒಬ್ಬ ಉಗ್ರ ಹತ್ಯೆ

ಬುಡ್ಗಾಮ್: ಜಮ್ಮು ಮತ್ತು ಕಾಶ್ಮೀರದ ಬುಡ್ಗಾಮ್ ಜಿಲ್ಲೆಯ ಅಶ್ದಾರ್ ಗಲಿ ಅರಣ್ಯ ಪ್ರದೇಶದಲ್ಲಿ ಶುಕ್ರವಾರ ಭದ್ರತಾ ಪಡೆಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಒಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ. ಇದೇ ಪ್ರದೇಶದಲ್ಲಿ ಇನ್ನಿಬ್ಬರು ಉಗ್ರರು ಅಡಗಿರುವ ಸಾಧ್ಯತೆ ಇದೆ ಎಂಬ ಶಂಕೆಯ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ವ್ಯಾಪಕ ಶೋಧ ಕಾರ್ಯಾಚರಣೆಯನ್ನು ಮುಂದುವರಿಸಿವೆ.

ದಕ್ಷಿಣ ಕಾಶ್ಮೀರದ ಪುಲ್ವಾಮಾ ಜಿಲ್ಲೆ ಹಾಗೂ ಜಮ್ಮು ವಲಯದ ಪೂಂಚ್ ಜಿಲ್ಲೆಯ ಗಡಿಗಳಿಗೆ ಸಮೀಪವಿರುವ ಪಿರ್ ಪಂಜಾಲ್ ಪರ್ವತ ಶ್ರೇಣಿಯ ಎತ್ತರದ ಮತ್ತು ದುರ್ಗಮ ಪ್ರದೇಶದಲ್ಲಿ ಗುಂಡಿನ ಚಕಮಕಿ ನಡೆದಿದೆ. ಅರಣ್ಯ ಪ್ರದೇಶವಾಗಿರುವುದರಿಂದ ಭದ್ರತಾ ಪಡೆಗಳು ಅತ್ಯಂತ ಎಚ್ಚರಿಕೆಯಿಂದ ಕಾರ್ಯಾಚರಣೆ ನಡೆಸುತ್ತಿವೆ.

ಅಶ್ದಾರ್ ಗಲಿ ಪ್ರದೇಶದಲ್ಲಿ ಉಗ್ರರ ಚಲನವಲನ ಕುರಿತು ನಿರ್ದಿಷ್ಟ ಗುಪ್ತಚರ



ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಸೇನೆ, ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಮತ್ತು ಜಮ್ಮು-ಕಾಶ್ಮೀರ ಪೊಲೀಸರ ವಿಶೇಷ ಕಾರ್ಯಾಚರಣೆ ತಂಡ (ಎಸ್ ಒಜಿ) ಜಂಟಿಯಾಗಿ ಶೋಧ ಕಾರ್ಯಾಚರಣೆ ಆರಂಭಿಸಿತ್ತು.

ಭದ್ರತಾ ಪಡೆಗಳು ಶಂಕಿತ ಪ್ರದೇಶವನ್ನು ಸುತ್ತುವರಿದು ಶೋಧ ನಡೆಸುತ್ತಿದ್ದ ವೇಳೆ ಅಡಗಿಕೊಂಡಿದ್ದ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ ಎನ್ನಲಾಗಿದೆ. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಗಳು ನಡೆಸಿದ ಪ್ರತಿದಾಳಿಯಲ್ಲಿ ಒಬ್ಬ ಉಗ್ರ ಹತ್ಯೆಯಾಗಿದ್ದಾನೆ.

ಶ್ರೀನಗರ ಮೂಲದ 15 ಕಾರ್ಪ್ಸ್, ಚಿನಾರ್ ಕಾರ್ಪ್ಸ್ ಎಂದೂ ಕರೆಯಲಾಗುವ ಸೇನಾ ಘಟಕವು ಕಾರ್ಯಾಚರಣೆಯಲ್ಲಿ ಒಬ್ಬ ಉಗ್ರ ಹತ್ಯೆಯಾಗಿರುವುದನ್ನು ಖಚಿತಪಡಿಸಿದೆ. ಕಾರ್ಯಾಚರಣೆ ನಡೆದ ಸ್ಥಳದಿಂದ ಎಕೆ-47 ರೈಫಲ್ ಸೇರಿದಂತೆ ಶಸ್ತ್ರಾಸ್ತ್ರಗಳು ಹಾಗೂ ಮದ್ದುಗುಂಡುಗಳನ್ನು ಭದ್ರತಾ ಪಡೆಗಳು ವಶಪಡಿಸಿಕೊಂಡಿವೆ ಎಂದು ತಿಳಿಸಲಾಗಿದೆ.

ಅಶ್ದಾರ್ ಗಲಿ ಪ್ರದೇಶದಲ್ಲಿ ಇನ್ನೂ ಇಬ್ಬರು ಉಗ್ರರು ಅಡಗಿರುವ ಸಾಧ್ಯತೆ ಇದೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ಸುತ್ತಮುತ್ತಲಿನ ಅರಣ್ಯ ಪ್ರದೇಶಗಳಲ್ಲಿ ಭದ್ರತಾ ಪಡೆಗಳು ಶೋಧವನ್ನು ತೀವ್ರಗೊಳಿಸಿವೆ. ಉಗ್ರರು ತಪ್ಪಿಸಿಕೊಳ್ಳದಂತೆ ಪ್ರಮುಖ ಮಾರ್ಗಗಳು ಹಾಗೂ ಅರಣ್ಯದ ಪ್ರವೇಶ ದಾರಿಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ.

ದುರ್ಗಮ ಪರ್ವತ ಪ್ರದೇಶ ಹಾಗೂ ದಟ್ಟ ಅರಣ್ಯದ ನಡುವೆಯೂ ಸೇನೆ, ಸಿಆರ್ ಪಿಎಫ್ ಮತ್ತು ಜಮ್ಮು-ಕಾಶ್ಮೀರ ಪೊಲೀಸರ ತಂಡಗಳು ಸಮನ್ವಯದಿಂದ ಕಾರ್ಯಾಚರಣೆ ಮುಂದುವರಿಸುತ್ತಿವೆ.

ನಿರ್ದಿಷ್ಟ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಜಂಟಿ ಶೋಧ ಕಾರ್ಯಾಚರಣೆ ಆರಂಭಿಸಲಾಗಿದ್ದು, ಕಾರ್ಯಾಚರಣೆ ಇನ್ನೂ ಮುಂದುವರಿದಿದೆ ಎಂದು ಸೇನೆಯು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮಾಹಿತಿ ನೀಡಿದೆ.

## ಶ್ರೀಕೃಷ್ಣನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ: ಎನ್.ಎಸ್. ಬೋಸರಾಜು



ರಾಯಚೂರು: ನಗರದ ವಾಸವಿನಗರದಲ್ಲಿರುವ ಶ್ರೀಕೃಷ್ಣ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಮಹಾನಗರ ಪಾಲಿಕೆ ವತಿಯಿಂದ ಆಯೋಜಿಸಿದ್ದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು ಭಾಗವಹಿಸಿ ಶ್ರೀಕೃಷ್ಣನಿಗೆ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶ್ರೀಕೃಷ್ಣನು ಧರ್ಮ, ಸತ್ಯ, ನ್ಯಾಯ ಹಾಗೂ ಕರ್ತವ್ಯದ ಮಹತ್ವವನ್ನು ಜಗತ್ತಿಗೆ ಸಾರಿದ ಮಹಾನ್ ದಾರ್ಶನಿಕ. ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು.

"ಧರ್ಮದ ಹಾದಿಯಲ್ಲಿ ಸಾಗೋಣ. ಸತ್ಯ ಮತ್ತು ನ್ಯಾಯವನ್ನು ಎತ್ತಿಹಿಡಿಯೋಣ. ಶ್ರೀಕೃಷ್ಣನ ಸಂದೇಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸೋಣ'' ಎಂದು ಕರೆ ನೀಡಿದರು.

ಶ್ರೀಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಜನತೆಗೆ ಶುಭಾಶಯ ಕೋರಿದ ಅವರು, ಎಲ್ಲರ ಬದುಕಿನಲ್ಲಿ ಶಾಂತಿ, ನೆಮ್ಮದಿ, ಸುಖ-ಸಮೃದ್ಧಿ ನೆಲೆಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಕೆ. ಶಾಂತಪ್ಪ, ಜಯಂತರಾವ್, ತಿಮ್ಮಪ್ಪ ನಾಡಗೌಡ, ಕಡಗೋಲ್ ಆಂಜನೇಯ್ಯ, ಬಸವರಾಜ ಪಾಟೀಲ, ಹನುಮಂತಪ್ಪ ಯಾದವ, ರಮೇಶ ಯಾದವ, ಮರೇಪ್ಪ ಯಾದವ, ಶಿವಕುಮಾರ ಯಾದವ ಸೇರಿದಂತೆ ಯಾದವ ಸಮಾಜದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

## ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಅದ್ದೂರಿ ದಹಿಹಂಡಿ ಸಂಭ್ರಮ

ಮಂತ್ರಾಲಯ: ಶ್ರೀಕೃಷ್ಣ ಜನ್ಮಾಷ್ಟಮಿಯ ಪವಿತ್ರ ಸಂದರ್ಭದಲ್ಲಿ ಮಂತ್ರಾಲಯದ ಮಧ್ವ ಕಾರಿಡಾರ್‌ನಲ್ಲಿ ಭಕ್ತಿ, ಉತ್ಸಾಹ ಹಾಗೂ ಸಂಭ್ರಮದಿಂದ ಅದ್ದೂರಿ ದಹಿಹಂಡಿ ಕಾರ್ಯಕ್ರಮ ನಡೆಯಿತು.

ಶ್ರೀಕೃಷ್ಣನ ಜನ್ಮೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಎಸ್‌ಜಿಎಸ್ ವಿದ್ಯಾಪೀಠದ ವಿದ್ಯಾರ್ಥಿಗಳು ಹಾಗೂ ಶ್ರೀಮಠದ ಸಿಬ್ಬಂದಿ ಅಪಾರ ಉತ್ಸಾಹದಿಂದ ಪಾಲ್ಗೊಂಡು ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದರು. ದಹಿಹಂಡಿ ಒಡೆಯುವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ತಂಡಗಳಾಗಿ ಭಾಗವಹಿಸಿ ಶಿಸ್ತು, ಸಮನ್ವಯ ಹಾಗೂ ಧೈರ್ಯದ ಪ್ರದರ್ಶನ ನೀಡಿದರು.

ಶ್ರೀಕೃಷ್ಣನ ಬಾಲಲೀಲೆಗಳನ್ನು ಸ್ಮರಿಸುವ ದಹಿಹಂಡಿ ಕಾರ್ಯಕ್ರಮವು ನೆರೆದಿದ್ದ ಭಕ್ತರು ಹಾಗೂ ಸಾರ್ವಜನಿಕರ ಗಮನ ಸೆಳೆಯಿತು. ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆ, ಭಕ್ತಿಭಾವ ಹಾಗೂ ಹಬ್ಬದ ವಾತಾವರಣದಿಂದ ಮಧ್ವ ಕಾರಿಡಾರ್ ಸಂಭ್ರಮದ ಕೇಂದ್ರವಾಗಿ ಮಾರ್ಪಟ್ಟಿತ್ತು.

ಕಾರ್ಯಕ್ರಮದ ವೇಳೆ ಶ್ರೀಕೃಷ್ಣನ ಜಯಘೋಷ, ಹರ್ಷೋದ್ಗಾರಗಳು ಮೊಳಗಿದವು. ಶ್ರೀಕೃಷ್ಣನ ಜೀವನ, ಆದರ್ಶ, ಭಕ್ತಿ ಹಾಗೂ ಧರ್ಮದ ಸಂದೇಶಗಳನ್ನು ಸ್ಮರಿಸಲಾಯಿತು. ಯುವ ಪೀಳಿಗೆಯಲ್ಲಿ ಭಾರತೀಯ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ಮೌಲ್ಯಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ದಹಿಹಂಡಿ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.

ಎಸ್‌ಜಿಎಸ್ ವಿದ್ಯಾಪೀಠದ ವಿದ್ಯಾರ್ಥಿಗಳು ಹಾಗೂ







ಶ್ರೀಮಠದ ಸಿಬ್ಬಂದಿ ಪರಸ್ಪರ ಸಹಕಾರದಿಂದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಕಾರ್ಯಕ್ರಮದ ವಿವಿಧ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಒಗ್ಗಟ್ಟು, ಸಹಕಾರ ಹಾಗೂ ತಂಡಭಾವವನ್ನು ಬೆಳೆಸುವಂತಾಗಿದ್ದವು.

ಕೊನೆಯಲ್ಲಿ ಶ್ರೀಕೃಷ್ಣನಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿ, ಎಲ್ಲರ ಜೀವನದಲ್ಲಿ ಶಾಂತಿ, ಸಂತೋಷ, ಆರೋಗ್ಯ ಮತ್ತು ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಲಾಯಿತು. ಭಕ್ತಿ ಮತ್ತು ಸಂಭ್ರಮದಿಂದ ನಡೆದ ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ದಹಿಹಂಡಿ ಆಚರಣೆ ಎಲ್ಲರ ಮನದಲ್ಲಿ ಸ್ಮರಣೀಯ ಕ್ಷಣಗಳನ್ನು ಮೂಡಿಸಿತು.

## ಭೂಮಾನಂದ ಕುಟುಂಬಕ್ಕೆ ಸರ್ಕಾರ ಬೆಂಬಲವಾಗಿ ನಿಲ್ಲಲಿದೆ: ಕೆ.ಎಚ್. ಮುನಿಯಪ್ಪ





ದೇವದುರ್ಗ: ತಾಲೂಕಿನ ಹದಿನಾಳ ಗ್ರಾಮದಲ್ಲಿ ಹತ್ಯೆಗೀಡಾದ ದಲಿತ ಮುಖಂಡ ಭೂಮಾನಂದ ಅವರ ನಿವಾಸಕ್ಕೆ ಸಚಿವ ಕೆ.ಎಚ್. ಮುನಿಯಪ್ಪ, ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹಾಗೂ ಶಾಸಕಿ ಕರಿಯಮ್ಮ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು.

ಭೂಮಾನಂದ ಅವರ ಹತ್ಯೆ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಈಗಾಗಲೇ ಕಾನೂನು ಕ್ರಮ ಆರಂಭವಾಗಿದ್ದು, ಮುಂದಿನ ಅಗತ್ಯ ಕ್ರಮಗಳನ್ನು ಕಾನೂನಿನ ಪ್ರಕಾರ ಕೈಗೊಳ್ಳಲಾಗುವುದು ಎಂದು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ಭೂಮಾನಂದ ಅವರ ಕುಟುಂಬದಲ್ಲಿ ಎಳೆಯ ಮಕ್ಕಳಿದ್ದು, ಅವರ ಭವಿಷ್ಯ ಹಾಗೂ ಕುಟುಂಬದ ಬದುಕಿಗೆ ಸರ್ಕಾರ ಜವಾಬ್ದಾರಿಯಿಂದ ಬೆಂಬಲವಾಗಿ ನಿಲ್ಲಲಿದೆ. ಕುಟುಂಬವು ಬದುಕು ಕಟ್ಟಿಕೊಳ್ಳಲು ಅಗತ್ಯ ನೆರವು ಒದಗಿಸುವುದರ ಜತೆಗೆ, ಸಾಧ್ಯವಾದಲ್ಲಿ ಭೂಮಿ ಒದಗಿಸುವ ಕುರಿತು ಜಿಲ್ಲಾಡಳಿತದೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪೊಲೀಸ್ ರಕ್ಷಣೆ ಮತ್ತು ಕಾನೂನು ಕ್ರಮಗಳು ಮಾತ್ರ ಶಾಶ್ವತ ಪರಿಹಾರವಲ್ಲ. ಗ್ರಾಮಗಳಲ್ಲಿ ಶಾಂತಿ ಮತ್ತು ಸಾಮರಸ್ಯ ನೆಲೆಸಬೇಕಾದರೆ ಸಮಾಜದ ಹಿರಿಯರು, ಮುಖಂಡರು ಹಾಗೂ ಗ್ರಾಮಸ್ಥರು ಒಗ್ಗಟ್ಟಾಗಿ ಕುಳಿತು ಸಮಸ್ಯೆಗಳನ್ನು ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವ್ಯಾಜ್ಯ, ದ್ವೇಷ ಹಾಗೂ

2ನೇ ಪುಟಕ್ಕೆ

## ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು: ಕೆ.ಹೆಚ್.ಮುನಿಯಪ್ಪ

ಸಿರವಾರ: ಸಮಾಜದಲ್ಲಿ ಪ್ರೀತಿ-ವಾತ್ಸಲ್ಯದಿಂದ ಒಟ್ಟಾಗಿ ಬಾಳುವ ಉತ್ತಮ ವಾತಾವರಣವನ್ನು ಗ್ರಾಮೀಣ ಭಾಗದಲ್ಲಿ ನಿರ್ಮಿಸಬೇಕು. ಅಶಾಂತಿ ಹಾಗೂ ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್.ಮುನಿಯಪ್ಪ ಅವರು ಅಧಿಕಾರಿಗಳಿಗೆ ಹೇಳಿದರು.



ಸೆಪ್ಟೆಂಬರ್ 04ರ ಶುಕ್ರವಾರ ದಂದು ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಮೃತ ಕು.ಅಶ್ವಿನಿ ಅವರ ಮನೆಗೆ ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿ ಮಾತನಾಡಿದರು.

ಈ ಹಿಂದುಳಿದ ಪ್ರದೇಶಗಳಲ್ಲಿ ವಿಶೇಷ ಕಾಳಜಿ ವಹಿಸಿ, ಅಲ್ಲಿನ ಪರಿಸ್ಥಿತಿಯನ್ನು ಸುಧಾರಿಸಲು ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು. ಸರ್ಕಾರದ ವಿವಿಧ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಸಮುದಾಯಗಳ ಮಧ್ಯ ಉತ್ತಮ ವಾತಾವರಣ ನಿರ್ಮಿಸಲು ಎಲ್ಲಾ ಇಲಾಖೆಯ ಅಧಿಕಾರಿಗಳು ಒಟ್ಟಾಗಿ ಶ್ರಮಿಸಬೇಕು. ಮೃತ ಅಶ್ವಿನಿ ಅವರ ಕುಟುಂಬಕ್ಕೆ ಸರ್ಕಾರದಿಂದ ಅಗತ್ಯ ನೆರವು ನೀಡಲಾಗುತ್ತದೆ. ಅಲ್ಲದೆ ಅವರ ಸಹೋದರನಿಗೆ ಸರ್ಕಾರಿ ನೌಕರಿ ನೀಡಲಾಗುತ್ತದೆ. ಹಾಗೂ ಅವರ ಜಮೀನಿಗೆ ನೀರಾವರಿ ವ್ಯವಸ್ಥೆ ಮಾಡಲು ಸೂಕ್ತ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ಹೊಕ್ರಾಣಿ ಗ್ರಾಮದಲ್ಲಿ ಅಶ್ವಿನಿ ಕೊಲೆ ಖಂಡಿಸಿ ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಮಾತನಾಡಿ, ದ್ವೇಷ-ಅಸೂಯೆಗಳನ್ನು ಮರೆತು, ಎಲ್ಲರೂ ಸಾಮರಸ್ಯದಿಂದ ಬದುಕು ನಡೆಸುವ ಮೂಲಕ ಮುನ್ನಡೆಯಬೇಕು. ಎಲ್ಲಿ ನಾವು ಪ್ರೀತಿ-ವಾತ್ಸಲ್ಯದ ಬದುಕನ್ನು

2ನೇ ಪುಟಕ್ಕೆ

## ಯುವಕರು ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕು: ನರಸಪ್ಪ ಯಾದವ್

ರಾಯಚೂರು ಸೆಪ್ಟಂಬರ್ 04 (ಕರ್ನಾಟಕ ವಾರ್ತೆ): ಸಮಾಜದ ಅಭಿವೃದ್ಧಿ ಕೇವಲ ಮಾತುಗಳಿಂದ ಸಾಧ್ಯವಿಲ್ಲ. ಯುವ ಜನರು ಶಿಕ್ಷಣ, ಕೌಶಲ್ಯ ಹಾಗೂ ಸ್ವಾವಲಂಬನೆಯನ್ನು ರೂಢಿಸಿಕೊಂಡು ಉದ್ಯೋಗ ಹುಡುಕುವ ಬದಲು ಇತರರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕೆಂದು ಉಪನ್ಯಾಸಕ ನರಸಪ್ಪ ಯಾದವ್ ಅವರು ಹೇಳಿದರು.

ಸೆಪ್ಟಂಬರ್ 04ರ ಶುಕ್ರವಾರ ದಂದು ನಗರದ ಯಾದವ್ ಸಂಘದ ಕಲ್ಯಾಣ ಮಂಟಪದಲ್ಲಿ ರಾಯಚೂರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಶಿಕ್ಷಣ, ಸಂಘಟನೆ, ಹೋರಾಟ ಮತ್ತು ಅರಿವು ಎಂಬ ಪಂಚಸೂತ್ರಗಳ ಆಧಾರದ ಮೇಲೆ ಜಿಲ್ಲಾ ಯಾದವ ಸಂಘ ಮುನ್ನಡೆಯುತ್ತಿದೆ. ಹಳ್ಳಿಗಳಲ್ಲಿ ಬಡ ತಾಯಂದಿರು ನೀಡಿದ 11 ರೂಪಾಯಿ ಪ್ರೀತಿಯ ಕೊಡುಗೆಯಿಂದ ಹಿಡಿದು



ಲಕ್ಷಾಂತರ ರೂಪಾಯಿ ದೇಣಿಗೆ ನೀಡಿದ ಪ್ರತಿಯೊಬ್ಬರ ಶ್ರಮವೂ ಸಂಘದ ಬೆಳವಣಿಗೆಗೆ ಸಮಾನ ಕಾರಣ 'ಧರ್ಮೋ ರಕ್ಷತಿ ರಕ್ಷಿತಃ' ಎಂಬ ತತ್ವದೊಂದಿಗೆ ಸಂಘವು ಪ್ರತಿಯೊಬ್ಬರ ಆತ್ಮಗೌರವವನ್ನು ಎತ್ತಿಹಿಡಿಯಲಿದೆ ಎಂದರು.

ಪೊಲೀಸ್, ಗ್ರಾಮ ಆಡಳಿತಾಧಿಕಾರಿ, ಪಿಡಿಒ ಹಾಗೂ ಸಿಇಟಿ ಪರೀಕ್ಷೆಗಳಿಗೆ ಸಮಾಜದ ಯುವಕರಿಗೆ 1 ತಿಂಗಳ ಉಚಿತ ತರಬೇತಿ ನೀಡುವುದು. ಕೌಶಲ್ಯಾಭಿವೃದ್ಧಿ ಯುವಕರು ಮತ್ತು ಮಹಿಳೆಯರಿಗೆ ಸ್ವಾವಲಂಬಿ ಬದುಕಿಗಾಗಿ ವರ್ಷಕ್ಕೆ ಕನಿಷ್ಠ ಎರಡು ಕೌಶಲ್ಯ ತರಬೇತಿ ಶಿಬಿರಗಳನ್ನು ಆಯೋಜಿಸುವುದು. ಭಗವದ್ಗೀತೆ ಬೋಧನೆ ಹಾಗೂ ಸಂಸ್ಕಾರಿಕ ಕಾರ್ಯಕ್ರಮಗಳ ಮೂಲಕ ನೈತಿಕ ಮೌಲ್ಯಗಳನ್ನು ಯುವ ಜನರಲ್ಲಿ ಬೆಳೆಸಬೇಕೆಂದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತ ಮುರುಳಿಧರರಾವ್, ಕೆ.ಹನುಮಂತಪ್ಪ ಜಿಲ್ಲಾ ಯಾದವ್ ಸಂಘದ ಅಧ್ಯಕ್ಷರು, ಎ.ಮಾರೆಪ್ಪ ವಕೀಲರು, ಉಪಾಧ್ಯಕ್ಷರು, ತಿಮ್ಮಪ್ಪ ನಾಡಗೌಡ, ಹರೀಶ್ ನಾಡಗೌಡ, ತಿಮ್ಮಪ್ಪ ಸಾಹುಕಾರ, ಗಟ್ಟಿ ಬೀಚಣ್ಣ, ಜನಾರ್ಧನರೆಡ್ಡಿ, ಜಿ.ಹನುಮಂತಪ್ಪ, ದಾನಪ್ಪ ಯಾದವ್, ಮಲ್ಲೇಶ್, ಉದಯ ಯಾದವ್ ಸೇರಿದಂತೆ ಇತರರು ಇದ್ದರು.

## ಜೋಳ ಖರೀದಿ ಹಣ ತಕ್ಷಣ ರೈತರ ಖಾತೆಗೆ ಜಮೆ ಮಾಡಿ: ಸೂಗುರಯ್ಯ ಆರ್.ಎಸ್.ಮಠ ಒತ್ತಾಯ

ಮಾನ್ವಿ, ಸೆ.3: ಜೋಳವನ್ನು ಖರೀದಿ ಕೇಂದ್ರಗಳಿಗೆ ನೀಡಿ ಐದು ತಿಂಗಳು ಕಳೆದರೂ ರೈತರ ಖಾತೆಗಳಿಗೆ ಹಣ ಜಮೆಯಾಗಿಲ್ಲ. ಕೂಡಲೇ ರೈತರ ಖಾತೆಗಳಿಗೆ ಜೋಳದ ಹಣ ಜಮೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಆರ್.ಎಸ್.ಮಠ ಒತ್ತಾಯಿಸಿದರು.



ಪಟ್ಟಣದ ರಾಯಚೂರುಸಿಂಧನೂರು ರಾಜ್ಯ ಹೆದ್ದಾರಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಸಮಿತಿ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಸ್ತೆ ತಡೆ ನಡೆಸಿ ಪ್ರತಿಭಟನೆ ಮಾಡಲಾಯಿತು. ಬಳಿಕ ಜಿಲ್ಲಾಧಿಕಾರಿಗಳಿಗೆ ತಹಶೀಲ್ದಾರ್ ಭೀಮರಾಯ ರಾಮಸಮುದ್ರ ಅವರ ಮೂಲಕ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಸೂಗುರಯ್ಯ ಆರ್.ಎಸ್.ಮಠ, ರಾಯಚೂರು ಜಿಲ್ಲೆಯ ಹಲವು ತಾಲೂಕುಗಳಲ್ಲಿ ಸಮರ್ಪಕ ಮಳೆಯಾಗದೆ ಬರ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಮಾನ್ವಿ ಮತ್ತು ಸಿರವಾರ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸದಿರುವುದು ಸರಿಯಲ್ಲ. ಕೂಡಲೇ ಎರಡೂ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿ ರೈತರಿಗೆ ಅಗತ್ಯ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ತುಂಗಭದ್ರಾ ಎಡದಂಡೆ ನಾಲೆಯ ಎಲ್ಲ ಉಪಕಾಲುವೆಗಳ ಹೂಳು ತೆಗೆದು ಕೊನೆಯ ಭಾಗದವರೆಗೂ ಸಮರ್ಪಕವಾಗಿ ನೀರು ಹರಿಯುವಂತೆ ಅಗತ್ಯ ನಿರ್ವಹಣಾ ಕ್ರಮ ಕೈಗೊಳ್ಳಬೇಕು. ಅಕ್ರಮವಾಗಿ ನೀರು ಹರಿಸಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು. ಜೋಳದ ಬೆಳೆಯನ್ನು ಮುಂಗಾರುಹಿಂಗಾರು ಎಂದು ತಾರತಮ್ಯ ಮಾಡದೆ ಕೇವಲ ಮುಂಗಾರು ಬೆಳೆಯೆಂದು ಪರಿಗಣಿಸಿ ಜಿಪಿಎಸ್ ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು.

ಪಶುವೈದ್ಯರ ಕೊರತೆ

2ನೇ ಪುಟಕ್ಕೆ

## ಸೆ.25ರಂದು ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ

ರಾಯಚೂರು: ರಾಯಚೂರು ತಾಲೂಕು ಖಾಸಗಿ ಅನುದಾನ ರಹಿತ ಶಾಲೆಗಳ ಒಕ್ಕೂಟ (ರುಸ್ಮಾ) ವತಿಯಿಂದ ಸೆ.25ರಂದು ಶುಕ್ರವಾರ ನಗರದ ರಂಗಮಂದಿರದಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ರುಸ್ಮಾ ಒಕ್ಕೂಟದ ಎನ್. ರಾಮಾಂಜನೇಯಲು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ಕಿಲ್ಲೇ ಬೃಹನ್ಮಠದ ಶ್ರೀ ಷ.ಬ್ರ. ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯಸಿಂಗ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಎನ್. ಎಸ್. ಬೋಸರಾಜು, ಲೋಕಸಭಾ ಸದಸ್ಯ ಜಿ. ಕುಮಾರ್ ನಾಯಕ್, ರಾಯಚೂರು ಶಾಸಕ ಶಿವರಾಜ ಪಾಟೀಲ, ವಿಧಾನ ಪರಿಷತ್



ಸದಸ್ಯ ವಸಂತಕುಮಾರ, ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಸೇರಿದಂತೆ ಹಲವು ಗಣ್ಯರು ಹಾಗೂ ಮುಖಂಡರು ಭಾಗವಹಿಸಲಿದ್ದಾರೆ ಎಂದರು.

ಪ್ರತಿವರ್ಷದಂತೆ ಈ ವರ್ಷವೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಐವರು ಗಣ್ಯರಿಗೆ ರುಸ್ಮಾ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಸಮಾಜಸೇವಾ ಕ್ಷೇತ್ರದಲ್ಲಿ ಉದ್ಯಮಿ ಮಾಚಿಕೊಂಡ ನರಸಿಂಹ, ವೈದ್ಯಕೀಯ ಕ್ಷೇತ್ರದಲ್ಲಿ ಡಾ. ಸಾಯಿಬಾಬ, ಪತ್ರಿಕಾ ರಂಗದಲ್ಲಿ ನಾಗರಾಜ ನಾಗತಿಹಳ್ಳಿ, ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಶಿವಕುಮಾರ ಹಾಗೂ ನ್ಯಾಯಾಂಗ ಕ್ಷೇತ್ರದಲ್ಲಿ ರಾಯಚೂರು ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಿವಶಂಕರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ರಾಯಚೂರು ತಾಲೂಕಿನಲ್ಲಿ ಸುಮಾರು 120 ಖಾಸಗಿ ಶಿಕ್ಷಣ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿಯೊಂದು ಶಾಲೆಯಿಂದ ತಲಾ ಒಬ್ಬ ಶಿಕ್ಷಕರನ್ನು ಶಿಕ್ಷಕ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿ ಗೌರವಿಸಲಾಗುವುದು. ಉತ್ತಮ ಸೇವೆ, ಕರ್ತವ್ಯನಿಷ್ಠೆ ಹಾಗೂ ಸೇವಾ ಮನೋಭಾವವನ್ನು ಪರಿಗಣಿಸಿ ಶಿಕ್ಷಕರನ್ನು ಆಯ್ಕೆ ಮಾಡಬೇಕು. ಆಯ್ಕೆಯಾದ ಶಿಕ್ಷಕರ ಹೆಸರುಗಳನ್ನು ಸೆ.10ರೊಳಗಾಗಿ ರುಸ್ಮಾ ಅಧ್ಯಕ್ಷರು ಅಥವಾ ಕಾರ್ಯದರ್ಶಿಗಳಿಗೆ ತಲುಪಿಸುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ನಾಗರೆಡ್ಡಿ, ವೆಂಕಟೇಶ, ಹೈ ಫಿರೋಜ್, ಶರಣಯ್ಯ ಸ್ವಾಮಿ ಹಾಗೂ ಚಂದ್ರಮೋಹನ್ ರೆಡ್ಡಿ ಉಪಸ್ಥಿತರಿದ್ದರು.

# ಇಂದು ನಗರ ಉಪ ವಿಭಾಗ 2ರಲ್ಲಿ ವಿದ್ಯುತ್ ವ್ಯತ್ಯಯ

ರಾಯಚೂರು ಸೆಪ್ಟಂಬರ್ 04 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ವ್ಯಾಪ್ತಿಯಲ್ಲಿ ವಿದ್ಯುತ್ ಮಾರ್ಗದ ದುರಸ್ತಿ ಹಾಗೂ ಸುಧಾರಣೆ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಸೆಪ್ಟಂಬರ್ 05ರ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ಕಮೇಲಾ, ಹರಿಜನ ವಾಡ, ಕೊಲ್ಮಿ, ಫಾರೂಖ್ ಅನ್ವರ ಕಂಪನಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕ ಉದ್ಯಾನವನ ಪ್ರವೇಶಕ್ಕೆ ತಾತ್ಕಾಲಿಕ 03 ತಿಂಗಳ ಕಾಲ ನಿರ್ಬಂಧ

ರಾಯಚೂರು ಸೆಪ್ಟಂಬರ್ 04 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರದ ರಂಗಮದಿರ ಸಮೀಪದ ಸಾರ್ವಜನಿಕ ಉದ್ಯಾನವನದಲ್ಲಿ ಅಭಿವೃದ್ಧಿ ಕಾಮಗಾರಿ 03 ತಿಂಗಳ ಕಾಲ ಸಾರ್ವಜನಿಕರ ಪ್ರವೇಶಕ್ಕೆ ತಾತ್ಕಾಲಿಕ ನಿರ್ಬಂಧ ವಿಧಿಸಲಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ ರಂಗಮದಿರ ಸಮೀಪದಲ್ಲಿರುವ ಸಾರ್ವಜನಿಕ ಉದ್ಯಾನವನದ ಅಭಿವೃದ್ಧಿ ಕಾಮಗಾರಿಯನ್ನು 2025-26ನೇ ಸಾಲಿನಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ ಅನುದಾನ ಅಡಿ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಳ್ಳಲಾಗುತ್ತಿದೆ. ಹಾಗೂ ಕಾಮಗಾರಿ ನಕಾಶೆ, ಸ್ಥಳ ಅವಕಾಶ ಇತ್ಯಾದಿ ಪಾಲಿಕೆಯಿಂದ ಅನುಮೋದನೆಗೊಂಡಿದೆ.

ಈ ಕಾಮಗಾರಿಯನ್ನು ಟೆಂಡರ್ ಕಾಮಗಾರಿಯ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಉದ್ದೇಶದಿಂದ ಅಗತ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರ ಸುರಕ್ಷತೆ, ಕಾಮಗಾರಿಯ ಸುಗಮ ಅನುಷ್ಠಾನ ಹಾಗೂ ಕಾಮಗಾರಿ ಪ್ರದೇಶದಲ್ಲಿ ಯಾವುದೇ ಅಡಚಣೆ ಉಂಟಾಗದತೆ ಮುನ್ನೆಚ್ಚರಿಕಾ ಕ್ರಮವಾಗಿ, ಸದರಿ ಉದ್ಯಾನವನಕ್ಕೆ 03 ತಿಂಗಳ ಅವಧಿಗೆ ಸಾರ್ವಜನಿಕರ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ.

ಸದರಿ ಅವಧಿಯಲ್ಲಿ ಸಾರ್ವಜನಿಕರು ಕಾಮಗಾರಿ ನಡೆಯುತ್ತಿರುವ ಉದ್ಯಾನವನದ ಆವರಣಕ್ಕೆ ಪ್ರವೇಶಿಸದೆ, ಸುರಕ್ಷತಾ ದೃಷ್ಟಿಯಿಂದ ಅಳವಡಿಸಲಾಗಿರುವ ತಡೆಗೋಡೆಗಳು ಹಾಗೂ ಸೂಚನಾ ಫಲಕಗಳನ್ನು ಪಾಲಿಸುವಂತೆ ಕೋರಲಾಗಿದೆ.

ಕಾಮಗಾರಿ ಪೂರ್ಣಗೊಂಡ ನಂತರ ಉದ್ಯಾನವನವನ್ನು ಸಾರ್ವಜನಿಕರ ಬಳಕೆಗೆ ಪುನಃ ಮುಕ್ತಗೊಳಿಸಲಾಗುವುದು. ಉದ್ಯಾನವನದ ಅಭಿವೃದ್ಧಿ ಕಾಮಗಾರಿಯನ್ನು ಸುರಕ್ಷಿತವಾಗಿ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಸಾರ್ವಜನಿಕರು ಸಹಕರಿಸುವಂತೆ ರಾಯಚೂರು ಮಹಾನಗರ ಪಾಲಿಕೆ ಮನವಿ ಮಾಡುತ್ತದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಯಾಪಲದಿನ್ನಿ ಶಾಲಾ ಆವರಣದಲ್ಲಿ ಪ್ರಜಾಸೇವೆ ಆಂದೋಲನ ಸಭೆ

ರಾಯಚೂರು ಸೆಪ್ಟಂಬರ್ 04 (ಕರ್ನಾಟಕ ವಾರ್ತೆ): ಸರ್ಕಾರದ ಮಾರ್ಗಸೂಚಿಯಂತೆ ಪ್ರತಿ ತಿಂಗಳ 1ನೇ ಮತ್ತು 3ನೇ ಶನಿವಾರದಂದು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕತೆಯಲ್ಲಿ ಮತ್ತು ಸ್ಥಳೀಯ ಶಾಸಕರ ಉಪಸ್ಥಿತಿಯಲ್ಲಿ ತಾಲೂಕ ಮಟ್ಟದ ಪ್ರಜಾಸೇವೆ ಆಂದೋಲವನ್ನು ಮತ್ತು 2ನೇ ಮತ್ತು 4 ನೇ ಶನಿವಾರದಂದು ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕ ಮಟ್ಟದ ಪ್ರಜಾಸೇವೆ ಅಂದೋಲವನ್ನು ಗ್ರಾಮ ಪಂಚಾಯತ ಕೇಂದ್ರವನ್ನಾಗಿಸಿ ಕಾರ್ಯಕ್ರಮವನ್ನು ಯಶಸ್ವಿಗೋಳಿಸಿ ಸಾರ್ವಜನಿಕರಿಗೆ ಮನೆ ಬಾಗಿಲಿಗೆ ಸರ್ಕಾರದ ಸೇವೆಗಳನ್ನು ಒದಗಿಸಲು ದಿನಾಂಕ:05-09-2026ರದು ಕರ್ನಾಟಕ ರಾಜ್ಯಾದ್ಯಾಂತ ಚಾಲನೆ ನೀಡಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಜಿಲ್ಲಾಧಿಕಾರಿಗಳ ಮಾರ್ಗಸೂಚಿಗಳಂತೆ ರಾಯಚೂರು ಜಿಲ್ಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಮತ್ತು ಸ್ಥಳಿಯ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಸಭೆಯನ್ನು ಹಮ್ಮಿಕೊಳ್ಳಲು ಸೂಕ್ತವಾದ ಸ್ಥಳವನ್ನು ಗುರುತಿಸಿ ಅಂದೋಲವನ್ನು ಯಶಸ್ವಿಗೊಳಿಸಲು ಸೂಚಿಸಿರುತ್ತಾರೆ. ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪಬ್ಲಿಕ್ ಯಾಪಲದಿನ್ನಿ ಶಾಲಾ ಆವರಣದಲ್ಲಿ ಘನ ಕರ್ನಾಟಕ ಸರ್ಕಾರದ ಪ್ರಜಾಸೇವೆ ಆಂದೋಲವನ್ನು ಏರ್ಪಡಿಸಲಾಗಿದೆ.

ರಾಯಚೂರು ತಾಲೂಕಿನ ತಾಲೂಕ ಮಟ್ಟದ ಅಧಿಕಾರಿಗಳು ಸದರಿ ಸಭೆಯಲ್ಲಿ ಹಾಜರಾಗಿರುತ್ತಾರೆ. ಚಂದ್ರಬಡಾ ಹೋಬಳಿಯ ಎಲ್ಲಾ ಗ್ರಾಮಗಳ ಸಾರ್ವಜನಿಕರು, ರೈತರು ಮತ್ತು ಪಿಂಚಣಿದಾರರು ಇತರೆ ಕುಂದು ಕೊರತೆಗಳನ್ನು ಅನುಭವಿಸುವ ಫಲಾನುಭವಿಗಳು ಅತೀ ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ಸದರಿ ಪ್ರಜಾ ಸೇವೆ ಅಂದೋಲವನ್ನು ಯಶಸ್ವಿಗೊಳಿಸಿ ತಮ್ಮ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳಬಹುದಾಗಿದೆ ಎಂದು ರಾಯಚೂರು ತಹಶೀಲ್ದಾರ ಸುರೇಶ ವರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ
ಜೀವನದಲ್ಲಿ ಬರುವ
ಪ್ರತಿ ನೋವು ನಿನ್ನನ್ನು
ಬಲವಾಗಿಸುತ್ತದೆ.

1576 ನೇಯ ದಿನಕ್ಕೆ
ಏಮ್ಸ್
ಹೋರಾಟ

# ವಾಲ್ಮೀಕಿ ವಿವಿಯಲ್ಲಿ ಗಣರಾಜ್ಯೋತ್ಸವ ಪಥಸಂಚಲನಕ್ಕೆ ಎನ್‌ಎಸ್‌ಎಸ್ ಸ್ವಯಂಸೇವಕರ ಆಯ್ಕೆ ಪ್ರಕ್ರಿಯೆ




ರಾಯಚೂರು: ದೇಹದಾರ್ಢ್ಯದ ಜೊತೆಗೆ ಸಾಂಸ್ಕೃತಿಕ ಅರಿವು, ಸಂವಹನ ಕೌಶಲ್ಯ ಮತ್ತು ಶಿಸ್ತು ಕೂಡ ಗಣರಾಜ್ಯೋತ್ಸವ ಪಥಸಂಚಲನಕ್ಕೆ ಆಯ್ಕೆಯಾಗುವ ಎನ್‌ಎಸ್‌ಎಸ್ ಸ್ವಯಂಸೇವಕರಿಗೆ ಅತ್ಯಂತ ಮುಖ್ಯವಾಗಿದೆ ಎಂದು ವಾಲ್ಮೀಕಿ ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ. ಜಿ.ಎಸ್. ಬಿರಾದಾರ ಹೇಳಿದರು.

ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಬುಧವಾರ 2027ರಲ್ಲಿ ನವದೆಹಲಿಯಲ್ಲಿ ನಡೆಯಲಿರುವ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಪಾಲ್ಗೊಳ್ಳಲು ವಿಶ್ವವಿದ್ಯಾಲಯ ಮಟ್ಟದ ವಿವಿಧ ಸ್ನಾತಕ ಪದವಿ ಕಾಲೇಜುಗಳ ಎನ್‌ಎಸ್‌ಎಸ್ ಸ್ವಯಂಸೇವಕರ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿತ್ತು. ದೇಹದಾರ್ಢ್ಯ ಪರೀಕ್ಷೆಯ ನಂತರ ನಡೆದ ಸಾಂಸ್ಕೃತಿಕ ಪ್ರತಿಭಾ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದ ಗಣರಾಜ್ಯೋತ್ಸವವು ಪ್ರತಿವರ್ಷ ಜನವರಿ 26ರಂದು ಆಚರಿಸಲ್ಪಡುವ ಮಹತ್ವದ ರಾಷ್ಟ್ರೀಯ ಹಬ್ಬವಾಗಿದ್ದು, ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆಯುವ ಭವ್ಯ ಪಥಸಂಚಲನ ಇದರ ಪ್ರಮುಖ ಆಕರ್ಷಣೆಯಾಗಿದೆ. 2027ರ ಗಣರಾಜ್ಯೋತ್ಸವ ಪಥಸಂಚಲನವು ಭಾರತದ ಸಾರ್ವಭೌಮತ್ವ, ಸಾಂಸ್ಕೃತಿಕ ವೈವಿಧ್ಯತೆ ಹಾಗೂ ರಕ್ಷಣಾ ಸಾಮರ್ಥ್ಯವನ್ನು ಜಗತ್ತಿನ ಮುಂದೆ ಪ್ರದರ್ಶಿಸುವ ಮಹತ್ವದ ವೇದಿಕೆಯಾಗಿದೆ ಎಂದು ತಿಳಿಸಿದರು.

ದೇಶದ ವಿವಿಧ ವಿಶ್ವವಿದ್ಯಾಲಯಗಳಿಂದ ಪ್ರತಿಭಾವಂತ ಎನ್‌ಎಸ್‌ಎಸ್ ಸ್ವಯಂಸೇವಕರನ್ನು ಆಯ್ಕೆ ಮಾಡಿ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಭಾಗವಹಿಸಲು ಅವಕಾಶ ನೀಡಲಾಗುತ್ತದೆ. ಇದು ವಿದ್ಯಾರ್ಥಿಗಳಿಗೆ ರಾಷ್ಟ್ರಮಟ್ಟದ ಮಹತ್ವದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಅಪೂರ್ವ ಅವಕಾಶವಾಗಿದ್ದು, ದೇಶಭಕ್ತಿ, ಶಿಸ್ತು ಮತ್ತು ಸೇವಾಭಾವವನ್ನು ಮತ್ತಷ್ಟು ಬೆಳೆಸುತ್ತದೆ ಎಂದರು.

ವಿಶ್ವವಿದ್ಯಾಲಯದ ವ್ಯಾಪ್ತಿಯ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ಎನ್‌ಎಸ್‌ಎಸ್ ಸ್ವಯಂಸೇವಕರಿಗೆ ದೈಹಿಕ ಸಾಮರ್ಥ್ಯ ಹಾಗೂ ಸಾಂಸ್ಕೃತಿಕ ಪ್ರತಿಭಾ ಪರೀಕ್ಷೆಗಳನ್ನು ನಡೆಸಲಾಗಿದ್ದು, ನಿಗದಿತ ಸಂಖ್ಯೆಯ ವಿದ್ಯಾರ್ಥಿಗಳನ್ನು ರಾಜ್ಯಮಟ್ಟದ ಆಯ್ಕೆ ಪ್ರಕ್ರಿಯೆಗೆ ಆಯ್ಕೆ ಮಾಡಲಾಗುತ್ತದೆ. ವಿವಿಧ ವಿಶ್ವವಿದ್ಯಾಲಯಗಳಿಂದ ಆಯ್ಕೆಯಾದ ಸ್ವಯಂಸೇವಕರು ರಾಜ್ಯಮಟ್ಟದಲ್ಲಿ ಸ್ಪರ್ಧಿಸಲಿದ್ದು, ಅಂತಿಮವಾಗಿ ಅರ್ಹತೆ ಪಡೆದವರು ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆಯುವ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಭಾಗವಹಿಸಲಿದ್ದಾರೆ ಎಂದು ವಿವರಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಉಪಕುಲಸಚಿವ ಡಾ. ಕೆ. ವೆಂಕಟೇಶ್ ಮಾತನಾಡಿ, ಗಣರಾಜ್ಯೋತ್ಸವ ಪಥಸಂಚಲನವು ಕೇವಲ ಒಂದು ಪ್ರದರ್ಶನವಲ್ಲ. ಅದು ಪ್ರತಿಯೊಬ್ಬ ಭಾರತೀಯನಲ್ಲೂ ದೇಶಭಕ್ತಿ, ಹೆಮ್ಮೆ ಮತ್ತು ಒಗ್ಗಟ್ಟಿನ ಭಾವನೆಯನ್ನು ಜಾಗೃತಗೊಳಿಸುವ ಮಹತ್ವದ ರಾಷ್ಟ್ರೀಯ ಉತ್ಸವವಾಗಿದೆ. ಭಾರತದ ರಕ್ಷಣಾ ಸಾಮರ್ಥ್ಯ ಮತ್ತು ವೈವಿಧ್ಯತೆಯನ್ನು ಜಗತ್ತಿನ ಎದುರು ಹೆಮ್ಮೆಯಿಂದ ಪ್ರದರ್ಶಿಸುವ ವೇದಿಕೆಯಾಗಿದೆ ಎಂದರು.

ವಾಲ್ಮೀಕಿ ವಿಶ್ವವಿದ್ಯಾಲಯದ ಎನ್‌ಎಸ್ ಎಸ್ ಸ್ವಯಂಸೇವಕರು ತಮಗೆ ದೊರೆತಿರುವ ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಪ್ರದರ್ಶನ ನೀಡಿ ವಿಶ್ವವಿದ್ಯಾಲಯಕ್ಕೆ ಕೀರ್ತಿ ತರಬೇಕು ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ವಾಣಿಜ್ಯ ನಿಕಾಯದ ಡೀನ್ ಪ್ರೊ. ಪಿ. ಭಾಸ್ಕರ್, ಕ್ರೀಡಾ ವಿಭಾಗದ ಸಂಯೋಜಕ ಮಲ್ಲಿಕಾರ್ಜುನ ಎನ್., ಸಾಂಸ್ಕೃತಿಕ ಸ್ಪರ್ಧೆಯ ತೀರ್ಪುಗಾರರಾದ ಡಾ. ರಶ್ಮಿರಾಣಿ ಅಗ್ನಿಹೋತ್ರಿ, ಮಲ್ಲಿಕಾರ್ಜುನ ಸ್ವಾಮಿ, ಎನ್‌ಎಸ್ ಎಸ್ ಕೋಚ್ ಭರಮರೆಡ್ಡಿ, ವಿವಿಧ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಹಾಗೂ ಸ್ವಯಂಸೇವಕರು ಉಪಸ್ಥಿತರಿದ್ದರು.

ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಅನಿಲ್ ಅಪ್ರಾಳ್ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು. ಡಾ. ಕೆ. ಮಂಜುನಾಥ್ ವಂದಿಸಿದರು.

# ಕುಷ್ಠರೋಗದ ಲಕ್ಷಣ ನಿರ್ಲಕ್ಷಿಸಬೇಡಿ: ಬಸಯ್ಯ




ರಾಯಚೂರು, ಸೆ.3: ದೇಹದ ಮೇಲೆ ಸಾಮಾನ್ಯವಾಗಿ ಮಚ್ಚೆಗಳು ಕಾಣಿಸಿಕೊಳ್ಳುವುದು ಸಹಜ. ಆದರೆ ಮಚ್ಚೆಗಳಿರುವ ಜಾಗದಲ್ಲಿ ತಿಳಿಬಿಳಿ ಅಥವಾ ತಾಮ್ರವರ್ಣದ ಚರ್ಮ, ಬೆವರು ಬಾರದಿರುವುದು, ಕೂದಲು ಬೆಳೆಯದಿರುವುದು ಅಥವಾ ಸ್ಪರ್ಶಜ್ಞಾನ ಕಡಿಮೆಯಾಗಿರುವುದು ಕಂಡುಬಂದರೆ ಅದನ್ನು ನಿರ್ಲಕ್ಷಿಸಬಾರದು. ಇವು ಚಿಕಿತ್ಸೆಯಿಂದ ಗುಣವಾಗುವ ಕುಷ್ಠರೋಗದ ಲಕ್ಷಣಗಳಾಗಿರಬಹುದು. ಇಂತಹ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ತಿಳಿಸಿದರು.

ಜಿಲ್ಲೆಯ ಕಲ್ಮಲ ಗ್ರಾಮದಲ್ಲಿ ನಡೆಯುತ್ತಿರುವ ಶ್ರೀ ಕರಿಯಪ್ಪ ತಾತನವರ ಜಾತ್ರಾ ಮಹೋತ್ಸವದ ಅಂಗವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಐಇಸಿ ವಿಭಾಗ ಹಾಗೂ ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಆಯೋಜಿಸಿದ್ದ ವಸ್ತುಪ್ರದರ್ಶನ ಮತ್ತು ತುರ್ತು ಚಿಕಿತ್ಸಾ ಕೇಂದ್ರದಲ್ಲಿ ಸಾರ್ವಜನಿಕರಿಗೆ ಮಾಹಿತಿ ನೀಡುತ್ತಾ ಅವರು ಮಾತನಾಡಿದರು.

ಕುಷ್ಠರೋಗವನ್ನು ಹ್ಯಾನ್ಸೆನ್ಸ್ ಕಾಯಿಲೆ ಎಂದೂ ಕರೆಯಲಾಗುತ್ತದೆ. ಇದು ಮೈಕೋಬ್ಯಾಕ್ಟೀರಿಯಂ ಲೆಪ್ರೇ ಎಂಬ ಬ್ಯಾಕ್ಟೀರಿಯಾದಿಂದ ಉಂಟಾಗುವ ದೀರ್ಘಕಾಲದ ಸಾಂಕ್ರಾಮಿಕ ಕಾಯಿಲೆಯಾಗಿದ್ದು, ಮುಖ್ಯವಾಗಿ ಚರ್ಮ ಮತ್ತು ನರಗಳ ಮೇಲೆ ಪರಿಣಾಮ ಬೀರುತ್ತದೆ ಎಂದು ವಿವರಿಸಿದರು.

ಚರ್ಮದ ಮೇಲೆ ಸ್ಪರ್ಶಜ್ಞಾನ ಕಡಿಮೆಯಿರುವ ತಿಳಿ ಅಥವಾ ಗುಲಾಬಿ ಬಣ್ಣದ ಮಚ್ಚೆಗಳು ಕಾಣಿಸಿಕೊಳ್ಳುವುದು, ಜುಮ್ಮೆನಿಸುವಿಕೆ, ಮರಗಟ್ಟುವಿಕೆ ಸೇರಿದಂತೆ ವಿವಿಧ ಲಕ್ಷಣಗಳು ಕಂಡುಬರಬಹುದು. ಕಾಯಿಲೆ ಮುಂದುವರಿದಲ್ಲಿ ಕೈಕಾಲುಗಳ ನರಗಳು ದಪ್ಪಗಾಗುವುದು, ಸ್ನಾಯುಗಳ ದೌರ್ಬಲ್ಯ ಹಾಗೂ ಅಂಗಗಳ ಚಲನವಲನದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ್ ಮಾತನಾಡಿ, ಕುಷ್ಠರೋಗಕ್ಕೆ ಸೂಕ್ತ ಚಿಕಿತ್ಸೆ ಪಡೆಯದೆ ನಿರ್ಲಕ್ಷಿಸಿದರೆ ಮೂಗಿನ ದಟ್ಟಣೆ, ಕಣ್ಣಿನ ಸಮಸ್ಯೆಗಳು ಹಾಗೂ ಕೈ-ಕಾಲುಗಳಲ್ಲಿ ಹುಣ್ಣುಗಳು ಕಾಣಿಸಿಕೊಳ್ಳಬಹುದು. ಆದರೆ ಈ ಕಾಯಿಲೆ ಸುಲಭವಾಗಿ ಹರಡುವುದಿಲ್ಲ. ಸೋಂಕಿತ ವ್ಯಕ್ತಿಯೊಂದಿಗೆ ದೀರ್ಘಕಾಲ ನಿರಂತರ ಸಂಪರ್ಕದಲ್ಲಿದ್ದಾಗ ಕೆಮ್ಮು ಅಥವಾ ಸೀನಿನ ಹನಿಗಳ ಮೂಲಕ ಸೋಂಕು ಹರಡುವ ಸಾಧ್ಯತೆ ಇದೆ. ಬಹುತೇಕ ಜನರ ರೋಗನಿರೋಧಕ ಶಕ್ತಿ ಈ ಬ್ಯಾಕ್ಟೀರಿಯಾವನ್ನು ಎದುರಿಸುವ ಸಾಮರ್ಥ್ಯ ಹೊಂದಿದೆ ಎಂದು ತಿಳಿಸಿದರು.

ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ರೇಣುಕಾ ಮಾತನಾಡಿ, ಕುಷ್ಠರೋಗ ಸಂಪೂರ್ಣವಾಗಿ ಗುಣಪಡಿಸಬಹುದಾದ ಕಾಯಿಲೆಯಾಗಿದೆ. ವಿಶ್ವ ಆರೋಗ್ಯ ಸಂಸ್ಥೆಯ ಶಿಫಾರಸಿನಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಹುಔಷಧಿ ಚಿಕಿತ್ಸೆ ಅಡಿಯಲ್ಲಿ ಉಚಿತವಾಗಿ ಔಷಧಿಗಳನ್ನು ನೀಡಲಾಗುತ್ತಿದೆ. ಕುಷ್ಠರೋಗ ಕುರಿತು ಜನರಲ್ಲಿ ಇರುವ ಮೂಢನಂಬಿಕೆ ಮತ್ತು ತಪ್ಪು ಕಲ್ಪನೆಗಳನ್ನು ದೂರ ಮಾಡಿ, ರೋಗ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ನೇತ್ರದಾನದ ಮಹತ್ವ, ಎಚ್‌ಐವಿ, ಸೊಳ್ಳೆಯಿಂದ ಹರಡುವ ಮಲೇರಿಯಾ, ಆನೆಕಾಲು ರೋಗ, ಡೆಂಗ್ಯೂ ಮತ್ತು ಚಿಕನ್‌ಗುನ್ಯಾ, ನಾಯಿಕಡಿತದಿಂದ ಉಂಟಾಗುವ ರೇಬಿಸ್, ಕಲುಷಿತ ನೀರಿನಿಂದ ಹರಡುವ ರೋಗಗಳು, ಮಳೆಗಾಲದಲ್ಲಿ ಕಂಡುಬರುವ ನೆಗಡಿ, ಕೆಮ್ಮು ಮತ್ತು ಜ್ವರದ ಸಂದರ್ಭಗಳಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು ಹಾಗೂ ವೈಯಕ್ತಿಕ ಸ್ವಚ್ಛತೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್. ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ್ ಜಗತಾಪ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಪ್ರೇಮಲತಾ, ಕವಿತಾ, ಪಾರ್ವತಿ ಹಾಗೂ ಆಶಾ ಕಾರ್ಯಕರ್ತೆಯರಾದ ನಾಗಮ್ಮ ಮತ್ತು ಮೀನಾಕ್ಷಿ ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಭೂಮಾನಂದ ಕುಟುಂಬಕ್ಕೆ ಸರ್ಕಾರ ಬೆಂಬಲವಾಗಿ ನಿಲ್ಲಲಿದೆ: ಕೆ.ಎಚ್. ಮುನಿಯಪ್ಪ

ಕೇಸುಗಳಿಂದ ಯಾರ ಬದುಕೂ ಹಾಳಾಗಬಾರದು. ಒಂದು ಜೀವ ಕಳೆದುಕೊಂಡಾಗ ಒಂದು ಕುಟುಂಬ ಮಾತ್ರವಲ್ಲದೆ ಮತ್ತೊಂದು ಕುಟುಂಬವೂ ಸಂಕಷ್ಟಕ್ಕೆ ಸಿಲುಕುತ್ತದೆ. ಇಂತಹ ಘಟನೆಗಳು ಮರುಕಳಿಸದಂತೆ ಸಮಾಜದಲ್ಲಿ ಮನಸ್ಸಿನ ಪರಿವರ್ತನೆ ಅಗತ್ಯವಿದೆ ಎಂದರು.

ಶಾಂತಿ, ಸಾಮರಸ್ಯ ಹಾಗೂ ಸಾಮಾಜಿಕ ನ್ಯಾಯದೊಂದಿಗೆ ಪ್ರತಿಯೊಂದು ಕುಟುಂಬವೂ ನೆಮ್ಮದಿಯಿಂದ ಬದುಕುವಂತಹ ವಾತಾವರಣ ನಿರ್ಮಾಣವಾಗಬೇಕು ಎಂದು ಸಚಿವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪೂವಿತಾ ಮಣಿವಣ್ಣನ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ತಹಶೀಲ್ದಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ದೇವದುರ್ಗ ಶಾಸಕಿ ಕರಿಯಮ್ಮ, ಶ್ರೀದೇವಿ ನಾಯಕ, ರಾಮಣ್ಣ ಇರಬಗೇರಾ, ತಿಮ್ಮಣ್ಣ ಕೆ., ಬಾಲಸ್ವಾಮಿ ಕೊಡ್ಲಿ, ಅಂಬಣ್ಣ ಅರೋಲಿಕರ್, ದುರುಗಣ್ಣ, ಎಂ.ಆರ್.ಬಿ., ಅಬ್ರಹಾಂ, ಅನಿಲ್ ಕುಮಾರ್, ಅಜಯ್ ಕುಮಾರ್, ಮಲ್ಲಪ್ಪ, ಹನುಮಂತಪ್ಪ ಕಾಕರಗಲ್ ಸೇರಿದಂತೆ ಹಲವರು ಇದ್ದರು.

# ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು: ಕೆ.ಹೆಚ್.ಮುನಿಯಪ್ಪ

ಮಾಡಿಕೊಂಡು ಹೋಗುತ್ತೇವೆಯೋ, ಅಲ್ಲಿ ಮಾತ್ರ ನಾವು ಮುಂದೆ ಹೋಗಲು ನಮಗೆ ಅವಕಾಶವಿದೆ ಎಂದರು.

ಸಾಮರಸ್ಯವನ್ನು ಮೂಡಿಸುವುದಕ್ಕಾಗಿ 41 ವರ್ಷಗಳಿಂದ ನಿರಂತರ ಹೋರಾಟದಲ್ಲೇ ಇದ್ದೇವೆ. ಎಲ್ಲಿಯವರೆಗೆ ನಮ್ಮಲ್ಲಿ ಸಾಮರಸ್ಯ ಮೂಡುವುದಿಲ್ಲವೋ, ಅಲ್ಲಿಯವರೆಗೆ ನಮ್ಮ ನಾಡಿನಲ್ಲಿ ಅಭಿವೃದ್ಧಿ ಹಾಗೂ ಶಾಂತಿ ನೆಲೆಸುವುದು ಕಷ್ಟಸಾಧ್ಯ. ಈ ನಿಟ್ಟಿನಲ್ಲಿ ಸಮಾಜದ ಎಲ್ಲರೂ ಒಂದಾಗಿ ಕೈಜೋಡಿಸಬೇಕೆಂದು ಸಚಿವರು ಕರೆ ನೀಡಿದ್ದಾರೆ.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರತಿ ವಾರ ತಾಲೂಕು ಮಟ್ಟದಲ್ಲಿ ಸಿಇಓ ಹಾಗೂ ಎಸ್.ಪಿ ಒಳಗೊಂಡತೆ ವಿವಿಧ ಗ್ರಾಮಗಳಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಭೇಟಿ ನೀಡಿ, ಸರ್ಕಾರದ ವಿವಿಧ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್. ಎಸ್.ಭೋಸರಾಜು, ಮಾನ್ವಿ ಶಾಸಕ ಹಂಪಯ್ಯ ನಾಯಕ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಕೆ.ಪಿ. ಮೋಹನ್ ರಾಜ್, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ರಾಕೇಶ್ ಕುಮಾರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಸಂಘಟನೆಯ ಮುಖಂಡರು ಹಾಗೂ ಹೊಕ್ರಾಣಿ ಗ್ರಾಮಸ್ಥರು ಇದ್ದರು.

# ಜೋಳ ಖರೀದಿ ಹಣ ತಕ್ಷಣ ರೈತರ ಖಾತೆಗೆ ಜಮೆ ಮಾಡಿ: ಸೂಗುರಯ್ಯ ಆರ್.ಎಸ್.ಮಠ ಒತ್ತಾಯ

ನೀಗಿಸಲು ಅಗತ್ಯ ಸಂಖ್ಯೆಯಲ್ಲಿ ಪಶುವೈದ್ಯರನ್ನು ನೇಮಕ ಮಾಡಬೇಕು. ಗ್ರಾಮೀಣ ಪ್ರದೇಶಗಳ ರಸ್ತೆಗಳನ್ನು ಸುಧಾರಿಸಿ ಪ್ರತಿಯೊಂದು ಹಳ್ಳಿಗೂ ಬಸ್ ಸಂಚಾರ ಕಲ್ಪಿಸಬೇಕು. ರೈತರ ಪಂಪ್‌ಸೆಟ್‌ಗಳಿಗೆ ಪ್ರತಿದಿನ 10 ಗಂಟೆ ವಿದ್ಯುತ್ ಪೂರೈಸಬೇಕು ಹಾಗೂ ಗ್ರಾಮೀಣ ಭಾಗದಲ್ಲಿನ ವಿದ್ಯುತ್ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಉಪಾಧ್ಯಕ್ಷ ದೊಡ್ಡ ಬಸನಗೌಡ ಬಲ್ಲಟಗಿ, ರಾಜ್ಯ ಸಹ ಕಾರ್ಯದರ್ಶಿ ಯಂಕಪ್ಪ ಖಾರಬಾರಿ, ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ್, ಜಿಲ್ಲಾ ಕಾರ್ಯಾಧ್ಯಕ್ಷ ಬಸವರಾಜ ಮಾಲಿ ಪಾಟೀಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರೆಡ್ಡಿ ಪಾಟೀಲ್, ಜಿಲ್ಲಾ ಉಪಾಧ್ಯಕ್ಷ ಹನುಮಗೌಡ ಜಾಲಹಳ್ಳಿ, ಮಾನ್ವಿ ತಾಲೂಕು ಅಧ್ಯಕ್ಷ ಸಿದ್ದಯ್ಯಸ್ವಾಮಿ ಗೋರ್ಕಲ್, ಶಂಕ್ರಪ್ಪಗೌಡ, ಹಾಜಿ ಮಸ್ತಾನ, ದೇವರಾಜ ನಾಯಕ, ಮಲ್ಲಣ್ಣ ಗೌಡೂರು, ಅಮರೇಶ ಆಲ್ದಾಳ್, ಬಸವರಾಜ ತಡಕಲ್, ಶಂಭನಗೌಡ ಸೇರಿದಂತೆ ರೈತ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ರಾಧಾ-ಕೃಷ್ಣ ವೇಷದಲ್ಲಿ ಮಿಂಚಿದ ಮಕ್ಕಳು




ದೇವದುರ್ಗ: ಮಕ್ಕಳು ರಾಧಾ-ಕೃಷ್ಣರ ಪಾತ್ರದಲ್ಲಿ ಕಾಣಿಸಿಕೊಂಡಾಗ ಅವರಲ್ಲಿ ಮೂಡುವ ಉಲ್ಲಾಸ, ಸಂಭ್ರಮ ಮತ್ತು ಮುಗ್ಧತೆ ವರ್ಣನಾತೀತ ಎಂದು ಪಿಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಪಾಟೀಲ್ ಓಣಿ ಶಾಲೆಯ ಮುಖ್ಯಗುರು ಶಾಂತಗೌಡ ನಾಗರಾಳ ಹೇಳಿದರು.

ಶ್ರೀಕೃಷ್ಣ ಜನ್ಮಾಷ್ಟಮಿ ನಿಮಿತ್ತ ಪಟ್ಟಣದ ಪಿಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶ್ರೀಕೃಷ್ಣ ವೇಷಭೂಷಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀಕೃಷ್ಣ ಜನ್ಮಾಷ್ಟಮಿ ಸಂದರ್ಭದಲ್ಲಿ ಮಕ್ಕಳಿಗೆ ರಾಧೆ ಮತ್ತು ಕೃಷ್ಣನ ವೇಷಭೂಷಣ ತೊಡಿಸಿದಾಗ ಇಡೀ ವಾತಾವರಣವೇ ದೈವಿಕ ಹಾಗೂ ಹರ್ಷದಾಯಕವಾಗಿ ಮಾರ್ಪಡುತ್ತದೆ. ಮಕ್ಕಳ ಆ ಸುಂದರ ರೂಪವು ಅವರಲ್ಲಿಯೂ, ನೋಡುವವರಲ್ಲಿಯೂ ಅಪಾರ ಸಂತೋಷ ಮೂಡಿಸುತ್ತದೆ ಎಂದು ಹೇಳಿದರು.

ಕೃಷ್ಣನ ಪಾತ್ರಧಾರಿಗಳಾದ ಮಕ್ಕಳು ಧೋತಿ, ನವಿಲುಗರಿಯ ಕಿರೀಟ, ಮುತ್ತಿನ ಹಾರ ಹಾಗೂ ವಿವಿಧ ಆಭರಣಗಳನ್ನು ಧರಿಸಿ ಕೈಯಲ್ಲಿ ಕೊಳಲು ಹಿಡಿದು ಗಮನ ಸೆಳೆದರು. ರಾಧೆಯ ವೇಷ ಧರಿಸಿದ ಮಕ್ಕಳು ಲಂಗ-ದಾವಣಿ, ಚೋಲಿ ಹಾಗೂ ಆಭರಣಗಳಿಂದ ಅಲಂಕರಿಸಿಕೊಂಡು ಸಂಭ್ರಮಿಸಿದರು. ಕಾಲಿನ ಗೆಜ್ಜೆಗಳ ನಾದ, ಮುತ್ತಿನ ಹಾರಗಳು ಹಾಗೂ ಸಾಂಪ್ರದಾಯಿಕ ವೇಷಭೂಷಣಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು.

ಕೃಷ್ಣನ ವೇಷ ಧರಿಸಿದ ಮಕ್ಕಳು ಕೈಯಲ್ಲಿ ಕೊಳಲು ಹಿಡಿದು, ಮೊಸರು ಮಡಕೆ ಒಡೆಯುವ ನಟನೆ ಮಾಡುವ ಮೂಲಕ ಶ್ರೀಕೃಷ್ಣನ ತುಂಟತನವನ್ನು ಅಭಿನಯಿಸಿದರು. ರಾಧೆಯ ವೇಷದಲ್ಲಿದ್ದ ಮಕ್ಕಳು ನಾಚಿಕೆ, ಮುಗ್ಧತೆ ಮತ್ತು ಸೌಂದರ್ಯದ ಭಾವದೊಂದಿಗೆ ನೃತ್ಯ ಮಾಡಿ ಕೃಷ್ಣನ ಜೊತೆ ಹೆಜ್ಜೆ ಹಾಕಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.

ಪೋಷಕರು ತಮ್ಮ ಮಕ್ಕಳನ್ನು ರಾಧಾ-ಕೃಷ್ಣರ ರೂಪದಲ್ಲಿ ಕಂಡು ಸಂತಸಪಟ್ಟರು. ಮಕ್ಕಳ ಫೋಟೋ ಮತ್ತು ವಿಡಿಯೋಗಳನ್ನು ಸೆರೆಹಿಡಿದು ಸಂಭ್ರಮಿಸಿದರು. ಮಕ್ಕಳ ಮುಗ್ಧ ನಗು ಮತ್ತು ರಾಧಾ-ಕೃಷ್ಣರ ದೈವಿಕ ಕಲ್ಪನೆ ಒಂದಾದಾಗ ಸುತ್ತಮುತ್ತಲಿನ ವಾತಾವರಣದಲ್ಲಿ ಸಕಾರಾತ್ಮಕ ಶಕ್ತಿ ಮೂಡುತ್ತದೆ ಎಂದು ಶಾಂತಗೌಡ ನಾಗರಾಳ ಹೇಳಿದರು.

ರಾಧಾ-ಕೃಷ್ಣರ ವೇಷಭೂಷಣದಲ್ಲಿ ಮಕ್ಕಳನ್ನು ನೋಡುವುದು ಪಾಲಕರ ಕಣ್ಣಿಗೆ ಹಬ್ಬವಾಗಿದೆ. ಇದು ಕೇವಲ ವೇಷಭೂಷಣದ ಕಾರ್ಯಕ್ರಮವಲ್ಲ, ಮಕ್ಕಳ ಮುಗ್ಧತೆ ಹಾಗೂ ಭಾರತೀಯ ಸಂಸ್ಕೃತಿ-ಪರಂಪರೆಯ ಸುಂದರ ಸಮ್ಮಿಲನವಾಗಿದೆ ಎಂದು ತಿಳಿಸಿದರು.

ಈ ವೇಳೆ ಶಾಲೆಯ ಶಿಕ್ಷಕಿಯರಾದ ಪವಿತ್ರ ಯಾಟಗಲ್, ನಾಗರತ್ನ, ಸುಷ್ಮಾ, ಯಾಶ್ಮಿನ್, ನೇಹಾ, ಪ್ರೇಮ, ಶಾರದಾ, ಲಕ್ಷ್ಮಿ, ಶಿಕ್ಷಕ ರಮೇಶ್ ಮಸರಕಲ್ ಸೇರಿದಂತೆ ಮಕ್ಕಳ ಪಾಲಕರು ಉಪಸ್ಥಿತರಿದ್ದರು.

# ಮಾನ್ವಿಯಲ್ಲಿ ಸೆ.5ರಂದು ಪ್ರಜಾ ಸೇವೆ ಆಂದೋಲನ



ಮಾನ್ವಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಸರ್ಕಾರವನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ದು, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ಪ್ರಜಾ ಸೇವೆ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ.

ಪ್ರಜಾ ಸೇವೆ ಆಂದೋಲನದ ಮೂಲಕ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಅವುಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸೆ.5ರಂದು ಬೆಳಿಗ್ಗೆ 10 ಗಂಟೆಗೆ ಮಾನ್ವಿಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಮಾನ್ವಿ ಪಟ್ಟಣದ ಬಾಸ್ಮಿಯಾ ಸರ್ಕಾರಿ ಕಾಲೇಜು ಆವರಣದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದು, ಸಾರ್ವಜನಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಪಹಣಿ ತಿದ್ದುಪಡಿ, ವಸತಿ ಸೌಲಭ್ಯ, ಮನೆ ನಿರ್ಮಾಣ, ಕಂದಾಯ ಸಮಸ್ಯೆಗಳು, ಕುಡಿಯುವ ನೀರು, ರಸ್ತೆ, ವಿದ್ಯುತ್, ಕೃಷಿ, ನೀರಾವರಿ, ಆರೋಗ್ಯ ಹಾಗೂ ಶಿಕ್ಷಣ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಸಾರ್ವಜನಿಕರು ಅಹವಾಲು ಸಲ್ಲಿಸಬಹುದಾಗಿದೆ. ಸ್ಥಳದಲ್ಲಿಯೇ ಪರಿಹರಿಸಲು ಸಾಧ್ಯವಾಗುವ ಸಮಸ್ಯೆಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು.

ಸರ್ಕಾರದ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಹಾಗೂ ಜನರ ಬಳಿಗೆ ಆಡಳಿತವನ್ನು ಕೊಂಡೊಯ್ಯುವ ನಿಟ್ಟಿನಲ್ಲಿ ಪ್ರಜಾ ಸೇವೆ ಆಂದೋಲನ ಮಹತ್ವ ಪಡೆದಿದೆ. ಸಾರ್ವಜನಿಕರು ಮುಕ್ತವಾಗಿ ತಮ್ಮ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತರಬೇಕೆಂದು ಜಿಲ್ಲಾಡಳಿತ ತಿಳಿಸಿದೆ.

# ಸೆ.5ರಂದು ದೇವದುರ್ಗದಲ್ಲಿ ಪ್ರಜಾಸೇವಾ ಆಂದೋಲನ ಕಾರ್ಯಕ್ರಮ



ದೇವದುರ್ಗ: ಪಟ್ಟಣದ ಶ್ರೀ ಮುರಿಗೆಪ್ಪ ಸಾಹು ಖೇಣೇದ್ ಕಲ್ಯಾಣ ಮಂಟಪದಲ್ಲಿ ತಾಲೂಕು ಆಡಳಿತದ ವತಿಯಿಂದ ಸೆ.5ರಂದು ಪ್ರಜಾಸೇವಾ ಆಂದೋಲನ ಕಾರ್ಯಕ್ರಮ ಜರುಗಲಿದೆ.

ಮನೆ ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಎಂಬ ಉದ್ದೇಶದೊಂದಿಗೆ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಪ್ರತಿ ಶನಿವಾರ ಕಡ್ಡಾಯವಾಗಿ ಆಯೋಜಿಸಲಾಗುತ್ತಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ ವಹಿಸಲಿದ್ದಾರೆ. ಸಾರ್ವಜನಿಕರು ತಮ್ಮ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದ್ದು, ವಿವಿಧ ಕುಂದುಕೊರತೆಗಳು ಹಾಗೂ ಬೇಡಿಕೆಗಳಿಗೆ ಸಂಬಂಧಿಸಿದ ಮನವಿಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು ಸಲ್ಲಿಸುವ ಬಹುತೇಕ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು. ಜಟಿಲ ಸ್ವರೂಪದ ಸಮಸ್ಯೆಗಳಿದ್ದಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ 2ರಿಂದ 3 ದಿನಗಳ ಒಳಗಾಗಿ ಅಹವಾಲುಗಳಿಗೆ ಪರಿಹಾರ ಕಲ್ಪಿಸಲು ಪ್ರಯತ್ನಿಸಲಾಗುವುದು.

ಕಾರ್ಯಕ್ರಮದಲ್ಲಿ ತಾಲೂಕಿನ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಲಿದ್ದು, ವಿವಿಧ ಇಲಾಖೆಗಳ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವ ವ್ಯವಸ್ಥೆಯನ್ನೂ ಮಾಡಲಾಗಿದೆ.

ಗ್ರಾಮೀಣ ಭಾಗದ ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ವಿವಿಧ ಸರ್ಕಾರಿ ಕಚೇರಿಗಳಿಗೆ ಪದೇಪದೇ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವನ್ನು ರೂಪಿಸಿದೆ.

ಆದ್ದರಿಂದ ದೇವದುರ್ಗ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ಅಹವಾಲು, ಕುಂದುಕೊರತೆ ಹಾಗೂ ಬೇಡಿಕೆಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ತಾಲೂಕು ಆಡಳಿತ ಕೋರಿದೆ.

# ದೇವಪುರ ಗ್ರಾಮದಲ್ಲಿ ಗಣೇಶ ಧ್ವಜಸ್ತಂಭ ಹಾಗೂ ಭೂಮಿ ಪೂಜೆ



ಸುರಪುರ: ತಾಲೂಕಿನ ದೇವಪುರ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ 4ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಧ್ವಜಸ್ತಂಭ ಪೂಜೆ, ಭೂಮಿ ಪೂಜೆ ಹಾಗೂ ಗೋಪೂಜೆ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಸಂಜೆ ನಡೆದ ಪೂಜಾ ಕಾರ್ಯಕ್ರಮದಲ್ಲಿ ಧ್ವಜಸ್ತಂಭಕ್ಕೆ ವಿಶೇಷ ಪೂಜೆ ಸಲ್ಲಿಸಿ, ಗಣೇಶೋತ್ಸವದ ಮುಂದಿನ ಧಾರ್ಮಿಕ ಕಾರ್ಯಕ್ರಮಗಳಿಗೆ ಶುಭಾರಂಭ ಮಾಡಲಾಯಿತು. ಇದೇ ಸಂದರ್ಭದಲ್ಲಿ ಭೂಮಿ ಪೂಜೆ ಹಾಗೂ ಗೋಪೂಜೆ ನೆರವೇರಿಸಿ ಗ್ರಾಮದ ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಲಾಯಿತು.

ಕಾರ್ಯಕ್ರಮದಲ್ಲಿ ದೇವಪುರ ಗ್ರಾಮದ ರಾಜಕೀಯ ಮುಖಂಡರು, ಹಿರಿಯರು, ಗ್ರಾಮಸ್ಥರು ಹಾಗೂ ಹಿಂದೂ ಮಹಾ ಗಣಪತಿ ಸಮಿತಿಯ ಪದಾಧಿಕಾರಿಗಳು ಮತ್ತು ಸದಸ್ಯರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಕ್ರೀಡಾಕೂಟದಲ್ಲಿ ಸ್ವಾಮಿ ವಿವೇಕಾನಂದ ವಿದ್ಯಾ ಸಂಸ್ಥೆ ವಿದ್ಯಾರ್ಥಿಗಳ ಭರ್ಜರಿ ಸಾಧನೆ: ರಾಜ್ಯಮಟ್ಟಕ್ಕೆ ಚೆಸ್ ಪ್ರತಿಭೆ ಆಯ್ಕೆ









ರಾಯಚೂರು: ನಗರದ ಸ್ವಾಮಿ ವಿವೇಕಾನಂದ ವಿದ್ಯಾ ಸಂಸ್ಥೆ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ವಿವಿಧ ಹಂತದ ಕ್ರೀಡಾಕೂಟಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಶಾಲೆಗೆ ಕೀರ್ತಿ ತಂದಿದ್ದಾರೆ. ವಾಲಿಬಾಲ್, ಚೆಸ್ ಹಾಗೂ ಕಬಡ್ಡಿ ಸ್ಪರ್ಧೆಗಳಲ್ಲಿ ಗಮನಾರ್ಹ ಸಾಧನೆ ಮಾಡಿರುವ ವಿದ್ಯಾರ್ಥಿಗಳು ತಾಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದ ಸ್ಪರ್ಧೆಗಳಿಗೆ ಆಯ್ಕೆಯಾಗಿದ್ದಾರೆ.

ವಾಲಿಬಾಲ್ ಸ್ಪರ್ಧೆಯಲ್ಲಿ ಶಾಲೆಯ ತಂಡವು ಕ್ಲಸ್ಟರ್ ಮಟ್ಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಜಯ ಸಾಧಿಸುವ ಮೂಲಕ ತಾಲೂಕು ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ. ವಿಶೇಷವಾಗಿ ಸತತ ಮೂರು ಬಾರಿ ಕ್ಲಸ್ಟರ್ ಮಟ್ಟದಲ್ಲಿ ಗೆಲುವು ದಾಖಲಿಸಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿರುವುದು ಶಾಲೆಯ ಕ್ರೀಡಾ ಸಾಧನೆಗೆ ಮತ್ತೊಂದು ಗರಿ ಮೂಡಿಸಿದೆ.

ಬಾಲಕರ ವಾಲಿಬಾಲ್ ತಂಡವೂ ಉತ್ತಮ ಪ್ರದರ್ಶನ ಮುಂದುವರಿಸಿದ್ದು, ಮೂರು ಬಾರಿ ಕ್ಲಸ್ಟರ್ ಮಟ್ಟದ ಸ್ಪರ್ಧೆಯಲ್ಲಿ ಜಯಗಳಿಸಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಹ್ಯಾಟ್ರಿಕ್ ಸಾಧನೆ ಮಾಡಿದೆ. ಆಟಗಾರರ ಶಿಸ್ತು, ನಿರಂತರ ಅಭ್ಯಾಸ ಹಾಗೂ ತಂಡದ ಸಮನ್ವಯ ಈ ಸಾಧನೆಗೆ ಕಾರಣವಾಗಿದೆ.

ಚೆಸ್ ವಿಭಾಗದಲ್ಲಿ ಶಾಲೆಯ ವಿದ್ಯಾರ್ಥಿ ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಜಯಗಳಿಸಿ ಜಿಲ್ಲಾ ಮಟ್ಟಕ್ಕೆ ಪ್ರವೇಶಿಸಿದ್ದು, ಜಿಲ್ಲಾ ಮಟ್ಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ವಿಜಯ ಸಾಧಿಸುವ ಮೂಲಕ ರಾಜ್ಯಮಟ್ಟದ ಚೆಸ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಚೆಸ್‌ನಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದು ಶಾಲೆಯ ವಿದ್ಯಾರ್ಥಿಗಳ ಬೌದ್ಧಿಕ ಪ್ರತಿಭೆ ಹಾಗೂ ಏಕಾಗ್ರತೆಗೆ ಸಾಕ್ಷಿಯಾಗಿದೆ.

ಕಬಡ್ಡಿ ಸ್ಪರ್ಧೆಯಲ್ಲಿಯೂ ಶಾಲೆಯ ತಂಡ ಕ್ಲಸ್ಟರ್ ಮಟ್ಟದಲ್ಲಿ ಜಯ ಸಾಧಿಸಿ ತಾಲೂಕು ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದೆ. ವಾಲಿಬಾಲ್ ಮತ್ತು ಕಬಡ್ಡಿಯಂತಹ ತಂಡದ ಕ್ರೀಡೆಗಳ ಜೊತೆಗೆ ಚೆಸ್‌ನಂತಹ ವೈಯಕ್ತಿಕ ಬೌದ್ಧಿಕ ಕ್ರೀಡೆಯಲ್ಲಿಯೂ ವಿದ್ಯಾರ್ಥಿಗಳು ಸಾಧನೆ ಮಾಡಿರುವುದು ಶಾಲೆಯ ಕ್ರೀಡಾ ಕ್ಷೇತ್ರದ ಸಮಗ್ರ ಬೆಳವಣಿಗೆಯನ್ನು ತೋರಿಸಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸ್ವಾಮಿ ವಿವೇಕಾನಂದ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಂ.ಆರ್. ನರಸಯ್ಯ ಶೆಟ್ಟಿ, ಉಪಾಧ್ಯಕ್ಷ ಸತ್ಯನಾರಾಯಣ, ಕಾರ್ಯದರ್ಶಿ ಕಟ್ಕಂ ಅಂಬರೀಶ್, ಖಜಾಂಚಿ ವೆಂಕಟರಾಜುಗುಪ್ತ, ಮುಖ್ಯೋಪಾಧ್ಯಾಯರಾದ ವನಿತಾ, ವೀಣಾ, ಗಾಯತ್ರಿ, ದೈಹಿಕ ಶಿಕ್ಷಣ ಶಿಕ್ಷಕ ನಾಗರಾಜ್ ಸೇರಿದಂತೆ ಶಾಲೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ಶಿಕ್ಷಕ ವೃಂದ ಅಭಿನಂದನೆ ಸಲ್ಲಿಸಿದ್ದಾರೆ.

ಮುಂದಿನ ತಾಲೂಕು ಹಾಗೂ ರಾಜ್ಯಮಟ್ಟದ ಸ್ಪರ್ಧೆಗಳಲ್ಲಿಯೂ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಶಾಲೆ ಹಾಗೂ ರಾಯಚೂರು ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಲಿ ಎಂದು ಶುಭ ಹಾರೈಸಿದ್ದಾರೆ. ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಸೂಕ್ತ ತರಬೇತಿ ಹಾಗೂ ಪ್ರೋತ್ಸಾಹ ನೀಡುವುದರ ಮೂಲಕ ಕ್ರೀಡಾ ಕ್ಷೇತ್ರದಲ್ಲಿ ಇನ್ನಷ್ಟು ಸಾಧನೆ ಮಾಡಲು ಶಾಲೆಯ ಆಡಳಿತ ಮಂಡಳಿ ಉತ್ತೇಜನ ನೀಡುತ್ತಿದೆ ಎಂದು ತಿಳಿಸಲಾಗಿದೆ.

# ತಾಯಮ್ಮ ದೇವಿ ಜಾತ್ರೆಯಲ್ಲಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ



ಮಾನ್ವಿ: ಪಟ್ಟಣದ ತಾಯಮ್ಮ ದೇವಿ ಜಾತ್ರಾ ಮಹೋತ್ಸವ ಹಾಗೂ ದಿವಂಗತ ಸೊಸೈಟಿ ಹನುಮಂತಪ್ಪ ಮೇಸ್ತ್ರಿ ಅವರ ಸ್ಮರಣಾರ್ಥ ಪ್ರಪ್ರಥಮ ಬಾರಿಗೆ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಆಯೋಜಿಸಲಾಯಿತು.

ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷ ಬಿ. ರಾಮಣ್ಣ ನಾಯಕ ಅವರು ಸ್ಪರ್ಧೆಗೆ ಚಾಲನೆ ನೀಡಿ ಬಹುಮಾನಗಳನ್ನು ಘೋಷಿಸಿದರು. ಪ್ರಥಮ ಬಹುಮಾನವಾಗಿ ₹11,000, ದ್ವಿತೀಯ ಬಹುಮಾನವಾಗಿ ₹5,000 ಹಾಗೂ ತೃತೀಯ ಬಹುಮಾನವಾಗಿ ₹3,000 ನೀಡಲಾಗುವುದು. ಅಲ್ಲದೆ 120 ಕೆಜಿ ತೂಕದ ಸಂಗ್ರಾಣಿ ಕಲ್ಲನ್ನು ಎತ್ತುವ ಸ್ಪರ್ಧಾರ್ಥಿಗೆ ವಿಶೇಷ ಬಹುಮಾನವಾಗಿ ₹5,000 ನೀಡಲಾಗುವುದು ಎಂದು ತಿಳಿಸಿದರು.

ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ತಾಯಮ್ಮ ದೇವಿಯ ಆಶೀರ್ವಾದ ಪಡೆದು ಮಾತನಾಡಿ, ಜಾತ್ರಾ ಮಹೋತ್ಸವದ ಅಂಗವಾಗಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಆಯೋಜಿಸಿರುವುದು ಹೆಮ್ಮೆಯ ಸಂಗತಿ. ಇಂತಹ ಜಾನಪದ ಹಾಗೂ ಸಾಂಪ್ರದಾಯಿಕ ಕ್ರೀಡೆಗಳು ಯುವಕರಲ್ಲಿ ಉತ್ಸಾಹ, ಧೈರ್ಯ ಮತ್ತು ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಗ್ರಾಮೀಣ ಕ್ರೀಡಾ ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.



ಜಾತ್ರಾ ಮಹೋತ್ಸವದ ಅಂಗವಾಗಿ ತಾಯಮ್ಮ ದೇವಿಯ ದರ್ಶನ ಪಡೆದ ಭಕ್ತರು ಪ್ರಸಾದ ಸ್ವೀಕರಿಸಿದರು. ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ ನೆರೆದಿದ್ದ ವೀಕ್ಷಕರ ಗಮನ ಸೆಳೆಯಿತು.

ಸ್ಪರ್ಧೆಯಲ್ಲಿ ಪ್ರಕಾಶ ಕೊತ್ತದೊಡ್ಡಿ ಪ್ರಥಮ ಬಹುಮಾನ, ನರಸಿಂಹ ಮಲಿಯಬಾದ ದ್ವಿತೀಯ ಬಹುಮಾನ ಪಡೆದರು. ತೃತೀಯ ಬಹುಮಾನವನ್ನು ಗೋವಿಂದ ಬಿಜಿನಗೇರ್ ಮತ್ತು ಆಂಜನೇಯ ದೇವದುರ್ಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ನಾಯ್ಡು ನಾಯಕ, ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕು ಅಧ್ಯಕ್ಷ ದೇವರಾಜ್ ನಾಯಕ, ತಾಲೂಕು ಪ್ರಧಾನ ಕಾರ್ಯದರ್ಶಿ ಕೊಂಡಯ್ಯ ನಾಯಕ, ಮಂಜುನಾಥ ನಾಯಕ, ಜೆಲ್ಲಿ ಅಂಜಿನೇಯ್ಯ ನಾಯಕ ನೀರಮಾನ್ವಿ, ಆಂಜನೇಯ ನಾಯಕ ನಸಲಾಪುರ, ಯಲ್ಲಪ್ಪ ನಾಯಕ, ತಾಯಣ್ಣ ನಾಯಕ, ಅಭಿ, ವಿನೋದ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಲೋಗೋ ಬಿಡುಗಡೆಗೊಳಿಸಿದ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್

ಬೆಂಗಳೂರು, ಸೆ.4(ಕರ್ನಾಟಕ ವಾರ್ತೆ): ಯುವಜನರನ್ನು ಒಗ್ಗೂಡಿಸಿ, ಏಕತೆ, ಸಾಮಾಜಿಕ ಸಾಮರಸ್ಯ, ಜವಾಬ್ದಾರಿಯುತ ನಾಗರಿಕತ್ವ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ರೂಪಿಸಲಾಗಿರುವ ಮಹತ್ವಾಕಾಂಕ್ಷಿ ಕಾರ್ಯಕ್ರಮವೇ ಭಾರತ್ ಜೋಡೋ.

ಈ ಮಹತ್ವದ ಕಾರ್ಯಕ್ರಮಕ್ಕೆ ವಿಶಿಷ್ಟ ಗುರುತನ್ನು ರೂಪಿಸುವ ನಿಟ್ಟಿನಲ್ಲಿ ಭಾರತ್ ಜೋಡೋ ಲೋಗೋ ವಿನ್ಯಾಸಕ್ಕಾಗಿ ಸಾರ್ವಜನಿಕರಿಂದ ವಿನ್ಯಾಸಗಳನ್ನು ಆಹ್ವಾನಿಸಲಾಗಿತ್ತು. ಇದಕ್ಕೆ ರಾಜ್ಯದಾದ್ಯಂತ ಉತ್ತಮ ಸ್ಪಂದನೆ ದೊರೆತಿದ್ದು, ಒಟ್ಟು 255 ಲೋಗೋ ವಿನ್ಯಾಸಗಳು ಸಲ್ಲಿಕೆಯಾಗಿದ್ದವು.

ಲೋಗೋ ಆಯ್ಕೆ ಪ್ರಕ್ರಿಯೆಯನ್ನು ಪಾರದರ್ಶಕ, ನ್ಯಾಯಸಮ್ಮತ ಹಾಗೂ ವೃತ್ತಿಪರವಾಗಿ ನಡೆಸುವ ಉದ್ದೇಶದಿಂದ ಸಲ್ಲಿಕೆಯಾಗಿದ್ದ ವಿನ್ಯಾಸಗಳನ್ನು ಪರಿಶೀಲಿಸಿ, ಅಂತಿಮವಾಗಿ ಆಯ್ಕೆ ಮಾಡುವ ಜವಾಬ್ದಾರಿಯನ್ನು ಕರ್ನಾಟಕ ಚಿತ್ರಕಲಾ ಪರಿಷತ್‌ಗೆ ವಹಿಸಲಾಗಿತ್ತು.

ಚಿತ್ರಕಲಾ ಪರಿಷತ್ ವತಿಯಿಂದ ಸಲ್ಲಿಕೆಯಾಗಿದ್ದ ವಿನ್ಯಾಸಗಳನ್ನು ಸಮಗ್ರವಾಗಿ ಪರಿಶೀಲಿಸಿ ಹಾಗೂ ಮೌಲ್ಯಮಾಪನ ನಡೆಸಿದ ಬಳಿಕ ಎರಡು ಲೋಗೋಗಳನ್ನು ಅಂತಿಮವಾಗಿ ಆಯ್ಕೆ ಮಾಡಲಾಗಿತ್ತು.

ಈ ಎರಡೂ ವಿನ್ಯಾಸಗಳನ್ನು ಅಂತಿಮ ಅನುಮೋದನೆಗಾಗಿ ಉಪಮುಖ್ಯಮಂತ್ರಿ ಶ್ರೀ ಪರಮೇಶ್ವರ್ ಅವರ ಮುಂದೆ ಮಂಡಿಸಲಾಗಿತ್ತು.

ಎರಡೂ ಅಂತಿಮ ವಿನ್ಯಾಸಗಳಲ್ಲಿನ ಪ್ರಮುಖ ಅಂಶಗಳು ಹಾಗೂ ಪರಿಕಲ್ಪನೆಗಳನ್ನು ಸೃಜನಾತ್ಮಕವಾಗಿ ಸಂಯೋಜಿಸಿ, ಭಾರತ್ ಜೋಡೋ ಕಾರ್ಯಕ್ರಮಕ್ಕೆ ವಿಶಿಷ್ಟ ಹಾಗೂ ಅರ್ಥಪೂರ್ಣ ದೃಶ್ಯ ಗುರುತನ್ನು ನೀಡುವ ಅಂತಿಮ ಲೋಗೋವನ್ನು ರೂಪಿಸಲಾಗಿದೆ.

ಈ ನೂತನ ಭಾರತ್ ಜೋಡೋ ಲೋಗೋವನ್ನು ಉಪಮುಖ್ಯಮಂತ್ರಿ ಪರಮೇಶ್ವರ್ ಅವರು ಇಂದು ಅಧಿಕೃತವಾಗಿ ಅನಾವರಣಗೊಳಿಸಿದರು. ಲೋಗೋ ಅನಾವರಣವು ರಾಜ್ಯಾದ್ಯಂತ ಭಾರತ್ ಜೋಡೋ ಕಾರ್ಯಕ್ರಮದ ಅನುಷ್ಠಾನದ ಪಯಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ.

ಹೊಸ ಲೋಗೋವು ಏಕತೆ, ಒಗ್ಗಟ್ಟು, ಯುವಜನರ ಸಕ್ರಿಯ ಪಾಲ್ಗೊಳ್ಳುವಿಕೆ ಹಾಗೂ ಕರ್ನಾಟಕದ ಜನತೆಯ ಸಾಮೂಹಿಕ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ಭಾರತ್ ಜೋಡೋ ಕಾರ್ಯಕ್ರಮದ ಮೂಲ ಆಶಯ ಹಾಗೂ ದೂರದೃಷ್ಟಿಯನ್ನು ಪ್ರತಿನಿಧಿಸುವ ರೀತಿಯಲ್ಲಿ ಲೋಗೋವನ್ನು ವಿನ್ಯಾಸಗೊಳಿಸಲಾಗಿದೆ.

# ಕೆಸರಹಟ್ಟಿ ಸರ್ಕಾರಿ ಶಾಲೆಗೆ ಊಟದ ತಟ್ಟೆ-ಲೋಟ ದೇಣಿಗೆ




ಲಿಂಗಸುಗೂರು: ತಾಲೂಕಿನ ಕೆಸರಹಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನಿವೃತ್ತ ಹಿರಿಯ ಮುಖ್ಯ ಶಿಕ್ಷಕ ಮೋಹನ್ ಸಿಂಗ್ ಅವರು ಶಾಲಾ ಮಕ್ಕಳ ಬಿಸಿಯೂಟಕ್ಕಾಗಿ ಅಗತ್ಯವಿದ್ದ ಊಟದ ತಟ್ಟೆ ಹಾಗೂ ಲೋಟಗಳನ್ನು ದೇಣಿಗೆಯಾಗಿ ನೀಡಿದ್ದಾರೆ.

ಶಾಲೆಯ ವಿದ್ಯಾರ್ಥಿಗಳ ಬಳಕೆಗೆ ಅಗತ್ಯವಿದ್ದ ಲೋಟ ಮತ್ತು ತಟ್ಟೆಗಳ ಕೊರತೆಯನ್ನು ಮನಗಂಡ ಮೋಹನ್ ಸಿಂಗ್ ಅವರು ತಮ್ಮ ಸ್ವಂತ ವೆಚ್ಚದಲ್ಲಿ ಸಾಮಗ್ರಿಗಳನ್ನು ಖರೀದಿಸಿ ಶಾಲೆಗೆ ನೀಡುವ ಮೂಲಕ ಸಮಾಜಮುಖಿ ಕಾರ್ಯಕ್ಕೆ ಮುಂದಾಗಿದ್ದಾರೆ.

ಈ ದೇಣಿಗೆಯಿಂದ ಶಾಲಾ ಮಕ್ಕಳಿಗೆ ಬಿಸಿಯೂಟ ಸೇರಿದಂತೆ ವಿವಿಧ ಸಂದರ್ಭಗಳಲ್ಲಿ ಊಟ ಮಾಡಲು ಅಗತ್ಯವಾದ ಸಾಮಗ್ರಿಗಳು ದೊರೆತಿದ್ದು, ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ನಿವೃತ್ತಿಯ ನಂತರವೂ ಶಿಕ್ಷಣ ಕ್ಷೇತ್ರದೊಂದಿಗೆ ತಮ್ಮ ಕಾಳಜಿಯನ್ನು ಮುಂದುವರಿಸಿರುವ ಮೋಹನ್ ಸಿಂಗ್ ಅವರ ಕಾರ್ಯ ಇತರರಿಗೆ ಪ್ರೇರಣೆಯಾಗಲಿ ಎಂದು ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಆಶಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಹುಲ್ಲಪ್ಪ ವಣಕಿಹಾಳ್, ಶಿಕ್ಷಕರಾದ ವೀರೇಶ ತೇರದಾಳ, ನಬಿಸಾಬ್, ಅಮರೇಶ ಹಾಗೂ ಅಡುಗೆ ಸಿಬ್ಬಂದಿಯರಾದ ಲಕ್ಷ್ಮೀ ಮತ್ತು ದೇವಮ್ಮ ಉಪಸ್ಥಿತರಿದ್ದರು.

# ಮಕ್ಕಳ ಹಕ್ಕು ಹಾಗೂ ಸುರಕ್ಷತೆ ಕುರಿತು ಕಾನೂನು ಅರಿವು ಕಾರ್ಯಕ್ರಮ



ಕುಷ್ಟಗಿ: ಇನ್ನರ್ ವ್ಹೀಲ್ ಕ್ಲಬ್ ಕುಷ್ಟಗಿ ಹಾಗೂ ಕಂದಕೂರು ಹಿರಿಯ ಪ್ರಾಥಮಿಕ ಶಾಲೆಯ ಸಹಯೋಗದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಮಕ್ಕಳ ಹಕ್ಕುಗಳು ಹಾಗೂ ಸುರಕ್ಷತೆ ಕುರಿತು ಕಾನೂನು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿ ಚೈತ್ರ ವೀರೇಶ ಮಾತನಾಡಿ, ಮಕ್ಕಳ ಹಕ್ಕುಗಳು, ಶಿಕ್ಷಣದ ಹಕ್ಕು, ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕು, ಪಾಲಕರ ಜವಾಬ್ದಾರಿ, ಬಾಲ್ಯವಿವಾಹ ತಡೆ ಕಾಯ್ದೆ, ಶಾಲೆಯಲ್ಲಿ ಲೈಂಗಿಕ ಕಿರುಕುಳದಿಂದ ರಕ್ಷಣೆ ಹಾಗೂ ಗುಡ್ ಟಚ್‌ಬ್ಯಾಡ್ ಟಚ್ ಸೇರಿದಂತೆ ವಿವಿಧ ಕಾನೂನು ಮತ್ತು ಸುರಕ್ಷತಾ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಸರಳವಾಗಿ ಮಾಹಿತಿ ನೀಡಿದರು.

ಮಕ್ಕಳಿಂದ ನಡೆಯಬಹುದಾದ ಕಾನೂನುಬಾಹಿರ ಕೃತ್ಯಗಳು, ಬಾಲ ನ್ಯಾಯ ಕಾಯ್ದೆಯಡಿ ಕೈಗೊಳ್ಳಲಾಗುವ ಕ್ರಮಗಳು ಹಾಗೂ ತಪ್ಪು ಮಾಡಿದ ಮಕ್ಕಳಿಗೆ ನೀಡಲಾಗುವ ಸುಧಾರಣಾತ್ಮಕ ಕ್ರಮಗಳ ಬಗ್ಗೆಯೂ ವಿವರಿಸಿದರು.

ಕಾನೂನಿನ ಉದ್ದೇಶ ಕೇವಲ ಶಿಕ್ಷೆ ನೀಡುವುದಲ್ಲ. ಮಕ್ಕಳು ತಪ್ಪು ದಾರಿಗೆ ಹೋಗದಂತೆ ತಡೆಯುವುದು ಹಾಗೂ ಅವರ ಭವಿಷ್ಯವನ್ನು ಸುರಕ್ಷಿತಗೊಳಿಸುವುದೇ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಅನ್ಯಾಯ, ಕಿರುಕುಳ ಅಥವಾ ಅಸುರಕ್ಷಿತ ಪರಿಸ್ಥಿತಿ ಎದುರಾದಾಗ ಮಕ್ಕಳು ಹೆದರದೆ, ವಿಶ್ವಾಸಾರ್ಹ ವ್ಯಕ್ತಿಗಳ ಸಹಾಯ ಪಡೆದು ಧೈರ್ಯದಿಂದ ಪ್ರತಿಕ್ರಿಯಿಸಬೇಕು ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಗೌರಮ್ಮ ಕುಡತನಿ, ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ, ನಿಕಟಪೂರ್ವ ಅಧ್ಯಕ್ಷೆ ಗಿರಿಜಾ ಮಾಲಿಪಾಟೀಲ್, ಎಡಿಟರ್ ಶಾರದಾ ಶೆಟ್ಟರ್, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.


ಕರ್ನಾಟಕ ಸರ್ಕಾರ

## ಪುರಸಭೆ ಕಾರ್ಯಾಲಯ ದೇವದುರ್ಗ

ತಾ॥ ದೇವದುರ್ಗ ಜಿ॥ ರಾಯಚೂರು

ಸಂ:ಪುಸದೇ/ಕಾಮಗಾರಿ/ಎಸ್.ಬಿ.ಎಂ/ಟೆಂಡರ್/ಪ್ರಕಟಣೆ//2025–26 ದಿನಾಂಕ : 04–09–2026

**ಅಲ್ಪಾವಧಿ ಟೆಂಡರ ಪ್ರಕಟಣೆ ("ಇ" –ಪ್ರೊಕ್ಯೂರಮೆಂಟ್ ಮೂಲಕ)**

ಈ ಮೂಲಕ ಪುರಸಭೆ ಮುಖ್ಯಾಧಿಕಾರಿಗಳು ಇವರು ಕರ್ನಾಟಕ ಸಾರ್ವಜನಿಕ ಸಂಗ್ರಾಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 ಹಾಗೂ ನಿಮಗಳು 2000 ಇ–ಪ್ರೊಕ್ಯೂರಮೆಂಟ್ ಪದ್ದತಿಯಡಿಯಲ್ಲಿ SBM 2.O ಅನುದಾನದಡಿ ತೆಗೆದುಕೊಂಡಿರುವ ಕಾಮಗಾರಿ ಇಂಡೆಂಟ್ ನಂಬರ್ 1) DMA/2025-26/OW/WORK_INDENT52519/Call-2 ಕಾಮಗಾರಿಗಳಿಗೆ ಇ–ಪ್ರೊಕ್ಯೂಪಮೆಂಟ್ ಪೋರ್ಟಾಲ್‌ನಲ್ಲಿ ಟೆಂಡರ್ ಕರೆಯಲಾಗಿದ್ದು ಲೋಕೋಪಯೋಗಿ ಇಲಾಖೆಯ ಸಿವಿಲ್ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ–1 ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಅಡಿಯಲ್ಲಿ ಈ ಟೆಂಡರನ್ನು ಆಹ್ವಾನಿಸಲಾಗಿದೆ. ಇ–ಪ್ರೊಕ್ಯೂಪಮೆಂಟ್‌ನಲ್ಲಿ https://kppp.karnataka.gov.in/ ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸತಕ್ಕದ್ದು ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೆಬ್‌ಸೈಟ್ ಹಾಗೂ ತಾಂತ್ರಿಕ ಅಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದು.

1. ಟೆಂಡರ್‌ಗಳನ್ನು ಸಲ್ಲಿಸಲು ಪ್ರಾರಂಭದದ ದಿನಾಂಕ : 04–09–2026 ಮಧ್ಯಾಹ್ನ : 11.30 ರಿಂದ
2. ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 17–09–2026 ಸಾಯಂಕಾಲ 4.30 ರ ವರೆಗೆ
3. ತಾಂತ್ರಿಕ ಟೆಂಡರ್ ಬಿಡ್ ತೆರೆಯುವ ದಿನಾಂಕ : 19–09–2026 ಸಾಯಂಕಾಲ : 11.00 ಗಂಟೆಗೆ.

ಸಹಿ/-
ಮುಖ್ಯಾಧಿಕಾರಿಗಳು
ಪುರಸಭೆ ಕಾರ್ಯಾಲಯ
ದೇವದುರ್ಗ

ಸಹಿ/-
ಆಡಳಿತಾಧಿಕಾರಿಗಳು
ಹಾಗೂ ಸಹಾಯಕ ಆಯುಕ್ತರು
ರಾಯಚೂರು

# ಮಳೆಗಾಗಿ ಪ್ರಾರ್ಥನೆ: ಮುನ್ನೂರು ಕಾಪು ಸಮಾಜದ ಪರಂಪರೆಯ ಪುಟ್ಟಿ ಜಾತ್ರೆ ಅದ್ದೂರಿ ಆಚರಣೆ



ರಾಯಚೂರು, ಸೆ.4- ಮುನ್ನೂರು ಕಾಪು ಸಮಾಜದ ಪರಂಪರೆಯ ಪುಟ್ಟಿ ಜಾತ್ರಾ ಮಹೋತ್ಸವ ಶುಕ್ರವಾರ ನಗರದಲ್ಲಿ ಅತ್ಯಂತ ಅದ್ದೂರಿಯಾಗಿ ನಡೆಯಿತು.

ಪ್ರತಿ ವರ್ಷದಂತೆ ಈ ವರ್ಷವೂ ಉತ್ತಮ ಮಳೆ ಸುರಿದು ರೈತರ ಬದುಕು ಹಸನಾಗಲಿ, ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಎಂಬ ಆಶಯದೊಂದಿಗೆ ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸುವ ಮೂಲಕ ಸಮಾಜದ ಪರಂಪರೆಯ ಪುಟ್ಟಿ ಜಾತ್ರೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡ ಹಾಗೂ ಮಾಜಿ ಶಾಸಕ ಎ. ಪಾಪಾರೆಡ್ಡಿ ಮತ್ತು ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ ಅವರ ನೇತೃತ್ವದಲ್ಲಿ ಪುಟ್ಟಿ ಜಾತ್ರಾ ಮಹೋತ್ಸವ ಜರುಗಿತು. ಮಹಿಳೆಯರು ತಲೆಯ ಮೇಲೆ ಬುಟ್ಟಿಗಂಟು ಹಾಗೂ ನೈವೇದ್ಯ ಹೊತ್ತು ನಗರದ ಗದ್ವಾಲ್ ರಸ್ತೆವರೆಗೆ ವಾದ್ಯಮೇಳದೊಂದಿಗೆ ಹೆಜ್ಜೆ ಹಾಕಿ ಮಳೆಗಾಗಿ ವಿಶೇಷ ಪೂಜೆ ಸಲ್ಲಿಸಿದರು.

ಮಹಿಳೆಯರು ತೆಪ್ಪದಲ್ಲಿ ಹೋಳಿಗೆ, ಅನ್ನ ಸೇರಿದಂತೆ ವಿವಿಧ ನೈವೇದ್ಯಗಳನ್ನು ಇಟ್ಟು ದೇವರಿಗೆ ಅರ್ಪಿಸಿ, ಉತ್ತಮ ಮಳೆ ಸುರಿದು ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಎಂದು ಪ್ರಾರ್ಥಿಸಿದರು. ನಂತರ ಮನೆಗಳಿಂದ ತಂದಿದ್ದ ಬುಟ್ಟಿಗಂಟಿನಲ್ಲಿದ್ದ ಹೋಳಿಗೆ, ಅನ್ನ, ರೊಟ್ಟಿ ಸೇರಿದಂತೆ ವಿವಿಧ ಖಾದ್ಯಗಳನ್ನು ಒಂದೆಡೆ ಸೇರಿಸಿ ಸಾಮೂಹಿಕ ಸಹಭೋಜನ ಸ್ವೀಕರಿಸಿದರು.

ನಗರದ ಮಕ್ತಲ್ ಪೇಟೆಯ ಲಕ್ಷ್ಮಿದೇವಿ ದೇವಸ್ಥಾನದಿಂದ ಮುನ್ನೂರು ಕಾಪು ಸಮಾಜದ ಆರಾಧ್ಯ ದೇವತೆ ಲಕ್ಷ್ಮಿದೇವಿಯ ಮೂರ್ತಿಯ ಪಲ್ಲಕ್ಕಿ ಮೆರವಣಿಗೆ ಗದ್ವಾಲ್ ರಸ್ತೆಯ ಲಕ್ಷ್ಮಿ ದೇವಸ್ಥಾನದವರೆಗೆ ನಡೆಯಿತು. ಮಹಿಳೆಯರು ಪುಟ್ಟಿಯನ್ನು ತಲೆಯ ಮೇಲೆ ಹೊತ್ತು ಸಂಭ್ರಮದಿಂದ ಜಾತ್ರಾ ಮಹೋತ್ಸವದಲ್ಲಿ ಹೆಜ್ಜೆ ಹಾಕಿ ಪ್ರಾರ್ಥನೆ ಸಲ್ಲಿಸಿದರು.

ಮಕ್ತಲ್ ಪೇಟೆಯ ಲಕ್ಷ್ಮಿದೇವಿ ದೇವಸ್ಥಾನದಲ್ಲಿ ಬೆಳಗ್ಗೆಯಿಂದ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ಡೊಳ್ಳು ಕುಣಿತ ಹಾಗೂ ಅಖಂಡ ಭಜನೆ ಕಾರ್ಯಕ್ರಮಗಳೊಂದಿಗೆ ಪುಟ್ಟಿ ಜಾತ್ರಾ ಮಹೋತ್ಸವಕ್ಕೆ ಮತ್ತಷ್ಟು ಮೆರುಗು ದೊರೆಯಿತು. ಗದ್ವಾಲ್ ರಸ್ತೆಯ ಲಕ್ಷ್ಮಿ ದೇವಸ್ಥಾನದಲ್ಲಿ ರಥ ಎಳೆಯುವ ಮೂಲಕ ಜಾತ್ರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ವೈಫಲ್ಯದಿಂದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಂಗಾರು ಕೈಕೊಟ್ಟ ಪರಿಣಾಮ ಬರದ ಪರಿಸ್ಥಿತಿ ಎದುರಾಗಿದ್ದು, ಉತ್ತಮ ಮಳೆ ಸುರಿದು ರೈತರ ಹಾಗೂ ನಾಡಿನ ಜನರ ಬದುಕು ಹಸನಾಗಲಿ ಎಂದು ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಪ್ರತಿ ವರ್ಷದಂತೆ ಈ ವರ್ಷವೂ ಪುಟ್ಟಿ ಜಾತ್ರಾ ಮಹೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗಿದ್ದು, ಸಮಾಜದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

ಈ ಸಂದರ್ಭದಲ್ಲಿ ಮುನ್ನೂರು ಕಾಪು ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ, ಮಾಜಿ ಶಾಸಕ ಎ. ಪಾಪಾರೆಡ್ಡಿ, ವಿ. ಕೃಷ್ಣಮೂರ್ತಿ, ಜಿ. ಶೇಖರ್ ರೆಡ್ಡಿ, ಬಂಗಿ ನರಸಾರೆಡ್ಡಿ, ಕುಕ್ಕಲ್ ನರಸಿಂಹಲು, ವಿ. ಲಕ್ಷ್ಮಿರೆಡ್ಡಿ, ರಾಳ ತಿಮ್ಮರೆಡ್ಡಿ, ಎನ್. ಶ್ರೀನಿವಾಸ್ ರೆಡ್ಡಿ, ನರ್ವ ಶ್ರೀನಿವಾಸ್ ರೆಡ್ಡಿ, ಬಿ. ಶೇಖರ್ ರೆಡ್ಡಿ, ಗುಂತಲ್ ತಿಮ್ಮರೆಡ್ಡಿ, ಜಿ. ಪ್ರತಾಪ್ ರೆಡ್ಡಿ, ಜಿ. ನರಸಾರೆಡ್ಡಿ, ವಿಜಯ ಭಾಸ್ಕರ್ ಎನ್. ಶೇಖರ್ ರೆಡ್ಡಿ, ಯಂಕಪ್ಪ, ಪಿ. ಮಲ್ಲೇಶ್, ಎಸ್. ಜನಾರ್ಧನ್ ರೆಡ್ಡಿ, ಬಿ. ರಾಘವೇಂದ್ರ, ಪುಂಡ್ಲ ರಾಜೇಂದ್ರ ರೆಡ್ಡಿ, ಜಿ. ಭೀಮ್ ರೆಡ್ಡಿ, ನಿಂಬೆಕಾಯಿ ಭೀಮರೆಡ್ಡಿ, ಶಿವರಾಜ ರೆಡ್ಡಿ, ಗುಡ್ಸಿ ಪ್ರತಾಪ್ ರೆಡ್ಡಿ, ವೀರೇಶ್ ರೆಡ್ಡಿ, ಯು. ನರಸರೆಡ್ಡಿ, ವಿಜಯ್ ರಾಜ್, ಸಂಜು ರೆಡ್ಡಿ, ಭಜನಾ ಮಂಡಳಿಯ ಸದಸ್ಯರು, ಮಹಿಳೆಯರು ಹಾಗೂ ಸಮಾಜದ ಮುಖಂಡರು ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ವಸತಿ ನಿಲಯದ ವಿದ್ಯಾರ್ಥಿಗಳ ಅಸ್ವಸ್ಥತೆ ಕುರಿತು ಸಮಗ್ರ ತನಿಖೆಗೆ ಒತ್ತಾಯ



ಮಾನ್ವಿ: ಪಟ್ಟಣದ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ನಿಲಯದಲ್ಲಿ ಆಹಾರ ಸೇವನೆಯಿಂದ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥರಾಗಿರುವ ಪ್ರಕರಣವನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಯಕರ್ನಾಟಕ ರಕ್ಷಣಾ ಸೇನೆಯ ತಾಲೂಕು ಅಧ್ಯಕ್ಷ ರಾಜಾ ವಿಜಯಕುಮಾರ ನಾಯಕ ಒತ್ತಾಯಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ವಸತಿ ನಿಲಯದ ಅಧಿಕಾರಿಗಳ ನಿರ್ಲಕ್ಷ್ಯದಿಂದ ಆಹಾರ ದೋಷ ಉಂಟಾಗಿ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ ಎಂದು ಆರೋಪಿಸಿದರು. ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಯ ವಿಷಯದಲ್ಲಿ ಯಾವುದೇ ನಿರ್ಲಕ್ಷ್ಯ ಸಹಿಸಲಾಗದು. ಘಟನೆಯ ನೈಜ ಕಾರಣವನ್ನು ಪತ್ತೆಹಚ್ಚಲು ಜಿಲ್ಲಾಡಳಿತ ಸೂಕ್ತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಮಾನ್ವಿ ತಾಲೂಕಿನಲ್ಲಿ ಖಾಯಂ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯನ್ನು ನೇಮಕ ಮಾಡಬೇಕು. ವಿವಿಧ ವಸತಿ ನಿಲಯಗಳಲ್ಲಿ ನಿಯಮಗಳಿಗೆ ವಿರುದ್ಧವಾಗಿ ಒಂದೇ ಸ್ಥಳದಲ್ಲಿ ಕಳೆದ 10 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಲ್ಯಾಣಾಧಿಕಾರಿ ವೆಂಕಟೇಶ ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕೆಂದು ಒತ್ತಾಯಿಸಿದರು.

ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಮತ್ತು ಪೌಷ್ಟಿಕ ಆಹಾರವನ್ನು ಒದಗಿಸುವುದರೊಂದಿಗೆ ಆಹಾರ ತಯಾರಿಕೆ, ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆಯ ಕುರಿತು ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು. ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಗೆ ಅಗತ್ಯವಿರುವ ಎಲ್ಲ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಲಾಲ್ ಶಾಸ್ತ್ರಿ ಕ್ಯಾಂಪ್, ಗುರುರಾಜ ಕುಲಕರ್ಣಿ, ಅಮರೇಶ ಗೂಳಿ, ಬಸವರಾಜ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಸತಿ ನಿಲಯ ವಿದ್ಯಾರ್ಥಿಗಳ ಅಸ್ವಸ್ಥತೆ ಪ್ರಕರಣ ತನಿಖೆಗೆ ಒತ್ತಾಯ: ರಾಜಾ ವಿಜಯಕುಮಾರ ನಾಯಕ



ಮಾನ್ವಿ: ಪಟ್ಟಣದ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ನಿಲಯದಲ್ಲಿ ಆಹಾರ ದೋಷದಿಂದ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥರಾಗಿರುವ ಪ್ರಕರಣವನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿ ಸೂಕ್ತ ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಯಕರ್ನಾಟಕ ರಕ್ಷಣಾ ಸೇನೆ ತಾಲೂಕು ಅಧ್ಯಕ್ಷ ರಾಜಾ ವಿಜಯಕುಮಾರ ನಾಯಕ ಒತ್ತಾಯಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ವಸತಿ ನಿಲಯದ ಅಧಿಕಾರಿಗಳ ನಿರ್ಲಕ್ಷ್ಯದಿಂದ ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದಾರೆ ಎಂದು ಆರೋಪಿಸಿದರು. ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮಾನ್ವಿ ತಾಲೂಕಿನಲ್ಲಿ ಖಾಯಂ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯನ್ನು ನೇಮಕ ಮಾಡಬೇಕು. ವಸತಿ ನಿಲಯಗಳಲ್ಲಿ ನಿಯಮಗಳಿಗೆ ವಿರುದ್ಧವಾಗಿ ಒಂದೇ ಸ್ಥಳದಲ್ಲಿ ಕಳೆದ 10 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು. ಅಲ್ಲದೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಲ್ಯಾಣಾಧಿಕಾರಿ ವೆಂಕಟೇಶ ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಒದಗಿಸುವುದರೊಂದಿಗೆ ಅವರ ಆರೋಗ್ಯ ಮತ್ತು ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಲಾಲ್ ಶಾಸ್ತ್ರಿ ಕ್ಯಾಂಪ್, ಗುರುರಾಜ ಕುಲಕರ್ಣಿ, ಅಮರೇಶ ಗೂಳಿ, ಬಸವರಾಜ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಟ್ಟಿ ಚಿನ್ನದ ಗಣಿ ಅತಿಥಿಗೃಹಕ್ಕೆ ಸಚಿವ ಕೆ.ಎಚ್. ಮುನಿಯಪ್ಪ ಭೇಟಿ



ಹಟ್ಟಿ ಚಿನ್ನದ ಗಣಿ: ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ಅವರು ಸೆಪ್ಟೆಂಬರ್ ತಿಂಗಳಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೈಗೊಂಡಿದ್ದ ಪ್ರವಾಸ ಕಾರ್ಯಕ್ರಮ ಮುಗಿಸಿಕೊಂಡು ಶುಕ್ರವಾರ ಸಂಜೆ ಹಟ್ಟಿ ಚಿನ್ನದ ಗಣಿ ಕಂಪನಿಯ ಅತಿಥಿಗೃಹಕ್ಕೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಕಂಪನಿಯ ಕಾರ್ಮಿಕರ ಅನ್‌ಫಿಟ್ ಯೋಜನೆಯನ್ನು ಜಾರಿಗೊಳಿಸುವಂತೆ ಕಾರ್ಮಿಕ ಮುಖಂಡರು ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾಜಿ ಶಾಸಕ ಡಿ.ಎಸ್. ಹೂಲಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಗ್ಯಾರಂಟಿ ಯೋಜನೆ ತಾಲೂಕು ಅಧ್ಯಕ್ಷ ವೆಂಕಟೇಶ ಗುತ್ತೇದಾರ್, ಮಾಜಿ ತಾಪಂ ಸದಸ್ಯ ಎಂ. ನಿಂಗರಾಜ, ಶಿವಣ್ಣ ನಾಯಕ ಕೋತಾ, ಅಹಮ್ಮದ್ ಬಾಬಾ, ಮಾಜಿ ಪಪಂ ಸದಸ್ಯರಾದ ಸಿರಾಜುದ್ದೀನ್, ಇಸ್ಮಾಯಿಲ್ ಖಾದ್ರಿ, ಅಂಜದ್ ಹುಸೇನ್, ಸೈಯದ್ ಟೈಲರ್, ಜುಜ್ಜನಾಯಕ, ಜಿಲ್ಲಾಧಿಕಾರಿ ಪೂವಿತಾ ಮಣಿವಣ್ಣನ್, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ, ಗಣಿ ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕ ಪ್ರಕಾಶ, ಪ್ರಧಾನ ವ್ಯವಸ್ಥಾಪಕ ಸೈಹೀಪ್ ಉಲ್ಲಾಖಾನ್, ಯಮನೂರಪ್ಪ, ಕಾರ್ಮಿಕ ಮುಖಂಡರಾದ ಶಾಂತಪ್ಪ ಆನ್ವರಿ, ಸಿದ್ದಪ್ಪ ಮುಂಡರಗಿ, ಜಮದಗ್ನಿ ಕೋತಾ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀಕೃಷ್ಣರಾಧೆಯ ವೇಷಭೂಷಣದಲ್ಲಿ ಗಮನ ಸೆಳೆದ ಮಕ್ಕಳು



ಮಾನ್ವಿ: ತಾಲೂಕಿನ ಚೀಕಲಪರ್ವಿ ಗ್ರಾಮದ ಶ್ರೀ ರುದ್ರಮುನೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮಕ್ಕೆ ರುದ್ರಗೌಡ ಹುಡೇದ್ ಚಾಲನೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಮಕ್ಕಳು ಶ್ರೀಕೃಷ್ಣ ಹಾಗೂ ರಾಧೆಯ ವೇಷಭೂಷಣಗಳನ್ನು ಧರಿಸಿ, ಶ್ರೀಕೃಷ್ಣನ ವಿವಿಧ ಅವತಾರಗಳ ರೂಪಕಗಳನ್ನು ಪ್ರದರ್ಶಿಸುವ ಮೂಲಕ ಗಮನ ಸೆಳೆದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡ ನಾಗರಾಜ್ ಶೆಟ್ಟಿ, ಶ್ರೀ ರುದ್ರಮುನೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಅಧ್ಯಕ್ಷ ಗಿರಿಧರ ಪೂಜಾರ್, ನೃತ್ಯ ನಿರ್ದೇಶಕ ಓಂಕಾರ್, ಶಾಲಾ ಆಡಳಿತಾಧಿಕಾರಿ ರಕ್ಷಿತಾ, ಶಿಕ್ಷಕರಾದ ಪ್ರಭು, ಶಾಂಭವಿ, ಶ್ರಾವಣಿ, ಶಾಂತಿ, ಲಕ್ಷ್ಮಿ, ವಿನುತಾ, ರೇಣುಕಾ, ನಂದಿನಿ, ಸುಮಯ್ಯ, ಶಮಿನಾ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಹಾಗೂ ಪಾಲಕರು ಭಾಗವಹಿಸಿದ್ದರು.

# ದೌರ್ಜನ್ಯ ಪ್ರಕರಣಗಳ ತನಿಖೆಯನ್ನು ಸಿಐಡಿ ಅಥವಾ ಎಸ್‌ಐಟಿಗೆ ವಹಿಸಲು ಒತ್ತಾಯ



ಮಾನ್ವಿ: ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಅಶ್ವಿನಿ ಹೊಕ್ರಾಣಿ, ಭೂಮಾನಂದ, ರಾಣೆಮ್ಮ ಹಾಗೂ ರಮೇಶ ನಕ್ಕುಂದಿ ಅವರ ಹತ್ಯೆ ಪ್ರಕರಣಗಳಿಗೆ ಸಂಬಂಧಿಸಿದಂತೆ ನ್ಯಾಯಾಂಗ ತನಿಖೆ ನಡೆಸಬೇಕು ಅಥವಾ ಪ್ರಕರಣಗಳನ್ನು ಸಿಐಡಿ ಅಥವಾ ಎಸ್‌ಐಟಿಗೆ ವಹಿಸಬೇಕು ಎಂದು ದೌರ್ಜನ್ಯ ವಿರೋಧಿ ಸಂಘಟನೆಗಳ ಒಕ್ಕೂಟ ರಾಯಚೂರು ವತಿಯಿಂದ ರಾಜ್ಯ ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ಒಕ್ಕೂಟದ ಸಂಚಾಲಕ ತಿಪ್ಪಣ್ಣ ಬಾಗಲವಾಡ ವಕೀಲರು ಮನವಿ ಸಲ್ಲಿಸಿ ಮಾತನಾಡಿ, ಜಿಲ್ಲೆಯಲ್ಲಿ ನಡೆದಿರುವ ಅಶ್ವಿನಿ ಹೊಕ್ರಾಣಿ, ಭೂಮಾನಂದ, ರಾಣೆಮ್ಮ ಹಾಗೂ ರಮೇಶ ನಕ್ಕುಂದಿ ಕೊಲೆ ಪ್ರಕರಣಗಳ ಕುರಿತು ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆ ನಡೆಯಬೇಕು. ತಪ್ಪಿತಸ್ಥರನ್ನು ಶೀಘ್ರ ಪತ್ತೆಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಸಂತ್ರಸ್ತ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ನೀಡಬೇಕು. ಜೊತೆಗೆ 10 ಎಕರೆ ಕೃಷಿ ಭೂಮಿ, ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ನೌಕರಿ ಹಾಗೂ ಕುಟುಂಬದ ಸದಸ್ಯರಿಗೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ, ಇಂತಹ ಘಟನೆಗಳು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದ ವಿಷಯವಲ್ಲ. ಮಹಿಳೆಯರ ಮೇಲೆ ನಡೆಯುವ ಅಮಾನವೀಯ ಕೃತ್ಯಗಳು ಇಡೀ ಸಮಾಜ ತಲೆತಗ್ಗಿಸುವಂತಹದ್ದು. ಇಂತಹ ಘಟನೆಗಳು ಮರುಕಳಿಸದಂತೆ ಸಮಾಜದಲ್ಲಿ ಶಾಶ್ವತ ಬದಲಾವಣೆ ತರಬೇಕಾಗಿದೆ ಎಂದರು.

ಘಟನೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಂದ ನಿರಂತರವಾಗಿ ಮಾಹಿತಿ ಪಡೆಯಲಾಗುತ್ತಿದೆ. ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅವರೂ ಪರಿಸ್ಥಿತಿಯ ಕುರಿತು ನಿರಂತರ ಸಂಪರ್ಕದಲ್ಲಿದ್ದು, ಕಾಲಕಾಲಕ್ಕೆ ಚರ್ಚೆ ನಡೆಸುತ್ತಿದ್ದಾರೆ. ಎಲ್ಲಾ ಪ್ರಕರಣಗಳಲ್ಲೂ ರಾಜ್ಯ ಸರ್ಕಾರ ಕಾನೂನು ಪ್ರಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಶಾಸಕ ಹಂಪಯ್ಯ ನಾಯಕ, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯಿತಿ ಸಿಇಒ ಈಶ್ವರ ಕಾಂದೂ, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್, ಆಯುಕ್ತ ರಾಕೇಶ್ ಕುಮಾರ್, ನಯೋಪ್ರ ಅಧ್ಯಕ್ಷರು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಕೆ. ಶಾಂತಪ್ಪ, ರುದ್ರಪ್ಪ ಅಂಗಡಿ, ಜಯಣ್ಣ, ನರಸಿಂಹಲು ಮಾಡಿಗಿರಿ, ದಲಿತ ಮುಖಂಡರಾದ ಎ. ಬಾಲಸ್ವಾಮಿ ಕೊಡ್ಲಿ, ಅಂಬಣ್ಣ ಅರೋಲಿ, ನಾಗಲಿಂಗಸ್ವಾಮಿ ಕೆ., ಅಬ್ರಹಾಂ ಹೊನ್ನಾಟ್ಟಿಗಿ, ಪ್ರಭುರಾಜ್ ಕೊಡ್ಲಿ, ಶಿವರಾಜ ಜಾನೆಕಲ್, ಶಿವರಾಜ ಉಮಳಿ ಹೊಸೂರು, ವಿರೂಪಾಕ್ಷಿ, ಚಂದ್ರಶೇಖರ ಕುರ್ಡಿ ಸೇರಿದಂತೆ ಅನೇಕ ದಲಿತಪರ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪಿಎಂ-ಕಿಸಾನ್ ಫಲಾನುಭವಿಗಳು ಇ-ಕೆವೈಸಿ ಪೂರ್ಣಗೊಳಿಸಲು ಕೃಷಿ ಇಲಾಖೆ ಮನವಿ

ರಾಯಚೂರು: ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಪಿಎಂ-ಕಿಸಾನ್) ಯೋಜನೆಯಡಿ ನೋಂದಾಯಿತರಾಗಿರುವ ಜಿಲ್ಲೆಯ ರೈತರು ಬಯೋಮೆಟ್ರಿಕ್ (ಬೆರಳಚ್ಚು) ಅಥವಾ ಫೇಸ್ ಆಥಂಟಿಕೇಶನ್ (ಮುಖ ದೃಢೀಕರಣ) ಮೂಲಕ ಇ-ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಜಂಟಿ ಕೃಷಿ ನಿರ್ದೇಶಕರು ರೈತರಿಗೆ ಮನವಿ ಮಾಡಿದ್ದಾರೆ.

ಪಿಎಂ-ಕಿಸಾನ್ ಯೋಜನೆಯ ಸೌಲಭ್ಯವನ್ನು ಅರ್ಹ ರೈತರಿಗೆ ಸಮರ್ಪಕವಾಗಿ ತಲುಪಿಸುವುದು ಹಾಗೂ ಫಲಾನುಭವಿಗಳ ಗುರುತನ್ನು ದೃಢೀಕರಿಸುವ ಉದ್ದೇಶದಿಂದ ಇ-ಕೆವೈಸಿ ಪ್ರಕ್ರಿಯೆಗೆ ಮಹತ್ವ ನೀಡಲಾಗಿದೆ. ಯೋಜನೆಯಡಿ ನೋಂದಾಯಿಸಿಕೊಂಡಿರುವ ರೈತರು ತಮ್ಮ ಇ-ಕೆವೈಸಿ ಸ್ಥಿತಿಯನ್ನು ಪರಿಶೀಲಿಸಿಕೊಂಡು, ಬಾಕಿ ಇದ್ದಲ್ಲಿ ವಿಳಂಬ ಮಾಡದೆ ಪೂರ್ಣಗೊಳಿಸಬೇಕು ಎಂದು ತಿಳಿಸಲಾಗಿದೆ.

ಇ-ಕೆವೈಸಿಗಾಗಿ ರೈತರು ಬಯೋಮೆಟ್ರಿಕ್ ವಿಧಾನದಲ್ಲಿ ಬೆರಳಚ್ಚು ದೃಢೀಕರಣ ಅಥವಾ ಫೇಸ್ ಆಥಂಟಿಕೇಶನ್ ಮೂಲಕ ಮುಖ ಗುರುತಿನ ದೃಢೀಕರಣ ಮಾಡಿಸಬಹುದಾಗಿದೆ. ಈ ಪ್ರಕ್ರಿಯೆಯಿಂದ ಯೋಜನೆಯ ಫಲಾನುಭವಿಗಳ ಮಾಹಿತಿ ದೃಢೀಕರಣಗೊಂಡು, ಅರ್ಹ ರೈತರಿಗೆ ಪಿಎಂ-ಕಿಸಾನ್ ಯೋಜನೆಯ ಆರ್ಥಿಕ ನೆರವು ತಲುಪಿಸಲು ಅನುಕೂಲವಾಗಲಿದೆ ಎಂದು ಕೃಷಿ ಇಲಾಖೆ ತಿಳಿಸಿದೆ.

ಇ-ಕೆವೈಸಿ ಪೂರ್ಣಗೊಳಿಸದೆ ಇರುವ ಫಲಾನುಭವಿಗಳು ಮುಂದಿನ ಕಂತುಗಳ ಸೌಲಭ್ಯ ಪಡೆಯುವಲ್ಲಿ ತೊಂದರೆ ಎದುರಿಸುವ ಸಾಧ್ಯತೆ ಇರುವುದರಿಂದ, ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ಅಗತ್ಯ ದಾಖಲೆಗಳೊಂದಿಗೆ ನಿಗದಿತ ಕೇಂದ್ರಗಳಲ್ಲಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

ವಿಶೇಷವಾಗಿ ಗ್ರಾಮೀಣ ಭಾಗದ ರೈತರಿಗೆ ಈ ಕುರಿತು ಸಮರ್ಪಕ ಮಾಹಿತಿ ತಲುಪಿಸುವ ಉದ್ದೇಶದಿಂದ "ಪಿಎಂ-ಕಿಸಾನ್ ಯೋಜನೆಯಡಿ ಬಯೋಮೆಟ್ರಿಕ್ (ಬೆರಳಚ್ಚು) ಅಥವಾ ಫೇಸ್ ಆಥಂಟಿಕೇಶನ್ (ಮುಖ ದೃಢೀಕರಣ) ಇ-ಕೆವೈಸಿ ಮಾಡಿಸುವುದು" ಕುರಿತ ಮಾಹಿತಿಯನ್ನು ಜಿಲ್ಲೆಯ ವಿವಿಧ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.

ಪಿಎಂ-ಕಿಸಾನ್ ಯೋಜನೆಯ ಫಲಾನುಭವಿಗಳು ಇ-ಕೆವೈಸಿ ಪ್ರಕ್ರಿಯೆಯನ್ನು ನಿರ್ಲಕ್ಷಿಸದೆ ಪೂರ್ಣಗೊಳಿಸಿ, ಸರ್ಕಾರದ ಯೋಜನೆಯ ಸೌಲಭ್ಯವನ್ನು ನಿರಂತರವಾಗಿ ಪಡೆದುಕೊಳ್ಳಬೇಕು ಎಂದು ರಾಯಚೂರು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿಯ ಪಾದಯಾತ್ರೆ ರಾಜಕೀಯ ಪ್ರೇರಿತ: ಡಾ. ರಝಾಕ್ ಉಸ್ತಾದ್ ಟೀಕೆ



ರಾಯಚೂರು: ಜಿಲ್ಲೆಯ ಲಿಂಗಸುಗೂರಿನಿಂದ ಬಳ್ಳಾರಿವರೆಗೆ ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಸಂಪೂರ್ಣ ರಾಜಕೀಯ ಪ್ರೇರಿತವಾಗಿದ್ದು, ಜನರ ನೈಜ ಸಮಸ್ಯೆಗಳಿಂದ ಗಮನ ಬೇರೆಡೆ ಸೆಳೆಯುವ ಪ್ರಯತ್ನವಾಗಿದೆ ಎಂದು ಕೆಪಿಸಿಸಿ ಮಾಧ್ಯಮ ವಿಭಾಗದ ರಾಜ್ಯ ವಕ್ತಾರ ಡಾ. ರಝಾಕ್ ಉಸ್ತಾದ್ ಆರೋಪಿಸಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ₹184 ಕೋಟಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಾದ ಸಂದರ್ಭದಲ್ಲಿಯೇ ₹179 ಕೋಟಿ ಹಣ ಸರ್ಕಾರಕ್ಕೆ ವಾಪಸ್ ಬಂದಿದೆ. ಪ್ರಕರಣ ಇನ್ನೂ ತನಿಖೆಯ ಹಂತದಲ್ಲಿದ್ದು, ಯಾರು ತಪ್ಪು ಮಾಡಿದ್ದಾರೆ ಎಂಬುದು ತನಿಖೆಯ ನಂತರ ಸ್ಪಷ್ಟವಾಗಲಿದೆ. ತಪ್ಪಿತಸ್ಥರಿಗೆ ಕಾನೂನು ಪ್ರಕಾರ ಶಿಕ್ಷೆಯಾಗಲಿದೆ. ಈ ಪ್ರಕರಣದಲ್ಲಿ ಕೇಂದ್ರ ಸರ್ಕಾರದ ಅಧೀನದ ಬ್ಯಾಂಕ್‌ನ ಪಾತ್ರವೂ ತನಿಖೆಗೆ ಒಳಪಟ್ಟಿದೆ. ಸಂಬಂಧಿಸಿದ ಸಚಿವರು ಈಗಾಗಲೇ ರಾಜೀನಾಮೆ ನೀಡಿರುವಾಗ ಬಿಜೆಪಿ ಯಾವ ಪುರುಷಾರ್ಥಕ್ಕಾಗಿ ಪಾದಯಾತ್ರೆ ನಡೆಸುತ್ತಿದೆ ಎಂದು ಅವರು ಪ್ರಶ್ನಿಸಿದ್ದಾರೆ.

ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ಉಂಟಾಗಿದ್ದು, ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ರೈತರಿಗೆ ಸೂಕ್ತ ಪರಿಹಾರ ಒದಗಿಸಲು ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಡಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸುವ ನಿಟ್ಟಿನಲ್ಲಿ ಬಿಜೆಪಿ ಹೋರಾಟ ನಡೆಸಲಿ. ನಿಜವಾಗಿಯೂ ಬಿಜೆಪಿ ಜನಪರವಾಗಿದ್ದರೆ ಬರ ಪರಿಹಾರ ವಿತರಣೆಗೆ ಒತ್ತಾಯಿಸಿ ಪಾದಯಾತ್ರೆ ನಡೆಸಲಿ. ಅದನ್ನು ಬಿಟ್ಟು ಜನರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ರಾಜಕೀಯ ಮೈಲೇಜ್ ಪಡೆಯಲು ನಡೆಸುತ್ತಿರುವ ಪಾದಯಾತ್ರೆಯಿಂದ ಯಾವುದೇ ಪ್ರಯೋಜನವಾಗುವುದಿಲ್ಲ ಎಂದು ಟೀಕಿಸಿದ್ದಾರೆ.

ಕಳೆದ ತಿಂಗಳು ಬಿಜೆಪಿ ಮುಖಂಡರು ರಾಜ್ಯದ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಬರ ಅಧ್ಯಯನ ನಡೆಸಿದ್ದರು. ಆ ಅಧ್ಯಯನದ ವರದಿಯನ್ನು ಏನು ಮಾಡಿದ್ದಾರೆ ಎಂಬುದನ್ನು ಮೊದಲು ಜನರಿಗೆ ತಿಳಿಸಬೇಕು. ವಿಧಾನಮಂಡಲ ಅಧಿವೇಶನ ನಡೆಯುವ ಸಂದರ್ಭದಲ್ಲಿಯೂ ಬಿಜೆಪಿ ನಡೆಸಿದ ಹೋರಾಟದಿಂದ ಬರಗಾಲದ ವಿಷಯ ಸಮಗ್ರವಾಗಿ ಚರ್ಚೆಗೆ ಬಾರದಂತಾಯಿತು. ಬರ ವೀಕ್ಷಣೆಯ ವರದಿಯನ್ನು ಸಂಬಂಧಿಸಿದವರಿಗೆ ಸಲ್ಲಿಸಿ, ಕೇಂದ್ರದಿಂದ ಹೆಚ್ಚಿನ ನೆರವು ತರಲು ಪ್ರಯತ್ನಿಸುವ ಬದಲು ಈಗ ಪಾದಯಾತ್ರೆ ನಡೆಸುತ್ತಿರುವುದರ ಉದ್ದೇಶವೇನು ಎಂದು ಪ್ರಶ್ನಿಸಿದ್ದಾರೆ.

ರಾಯಚೂರು ಜಿಲ್ಲೆಯ ಬಹುತೇಕ ತಾಲೂಕುಗಳು ಬರ ಪರಿಸ್ಥಿತಿಯಿಂದ ತತ್ತರಿಸಿವೆ. ರೈತರು ಬೆಳೆ ನಷ್ಟ, ನೀರಿನ ಕೊರತೆ ಮತ್ತು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ತುಂಗಭದ್ರಾ ಎಡದಂಡೆ ಕಾಲುವೆಯ ನೀರು ಕೊನೆಯ ಭಾಗದ ರೈತರಿಗೆ ತಲುಪುತ್ತಿಲ್ಲ ಎಂದು ರೈತರು ನಿರಂತರವಾಗಿ ಹೋರಾಟ ನಡೆಸುತ್ತಿದ್ದಾರೆ. ಕೇಂದ್ರ ಸರ್ಕಾರದ ಎನ್‌ಡಿಆರ್‌ಎಫ್ ಮಾನದಂಡಗಳು ಕಠಿಣವಾಗಿರುವ ಕಾರಣ ಜಿಲ್ಲೆಯ ಎಲ್ಲ ತಾಲೂಕುಗಳು ಬರಪೀಡಿತ ಪಟ್ಟಿಯಲ್ಲಿ ಸೇರಿಲ್ಲ ಎಂಬ ಅಸಮಾಧಾನವೂ ರೈತರಲ್ಲಿದೆ ಎಂದು ತಿಳಿಸಿದ್ದಾರೆ.

ಹಲವೆಡೆ ಕುಡಿಯುವ ನೀರಿನ ಸಮಸ್ಯೆಯೂ ಉಂಟಾಗಿದ್ದು, ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸುವುದನ್ನು ಬಿಟ್ಟು ರಾಜಕೀಯ ಉದ್ದೇಶದ ಪಾದಯಾತ್ರೆ ನಡೆಸುವುದು ಎಷ್ಟರಮಟ್ಟಿಗೆ ಸಮಂಜಸ ಎಂಬುದನ್ನು ಬಿಜೆಪಿ ನಾಯಕರು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಪಾದಯಾತ್ರೆಯ ಹೆಸರಿನಲ್ಲಿ ರಾಜಕೀಯ ಆರೋಪ-ಪ್ರತ್ಯಾರೋಪ ಮಾಡುವುದಕ್ಕಿಂತ ಬರಗಾಲ, ರೈತರ ಸಮಸ್ಯೆ, ನೀರಾವರಿ, ಕುಡಿಯುವ ನೀರು ಹಾಗೂ ಪರಿಹಾರ ವಿತರಣೆ ಸೇರಿದಂತೆ ಜನರ ಸಮಸ್ಯೆಗಳ ಕುರಿತು ಧ್ವನಿ ಎತ್ತುವುದು ಸೂಕ್ತ. ಜನಪರ ವಿಷಯಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸಿದರೆ ಅದಕ್ಕೆ ಅರ್ಥವಿರುತ್ತದೆ ಎಂದು ಕೆಪಿಸಿಸಿ ಮಾಧ್ಯಮ ವಿಭಾಗದ ರಾಜ್ಯ ವಕ್ತಾರ ಡಾ. ರಝಾಕ್ ಉಸ್ತಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.5ರಂದು ಮಾನ್ವಿಯಲ್ಲಿ ಪ್ರಜಾಸೇವೆ ಆಂದೋಲನ-2 ಕಾರ್ಯಕ್ರಮ



ಮಾನ್ವಿ: ಪಟ್ಟಣದ ಬಾಷುಮಿಯಾ ಸಾಹುಕಾರ್ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸೆ.5ರಂದು ಪ್ರಜಾಸೇವೆ ಆಂದೋಲನ-2 ಕಾರ್ಯಕ್ರಮ ಆಯೋಜಿಸಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಅಜಯಸಿಂಗ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ವಿವಿಧ ಹಕ್ಕುಪತ್ರಗಳನ್ನು ವಿತರಿಸುವುದರ ಜೊತೆಗೆ ಅವರ ಅಹವಾಲುಗಳನ್ನು ಸ್ವೀಕರಿಸಲಾಗುವುದು. ಪಿಂಚಣಿ, ಪಹಣಿ, ವಸತಿ, ಹೊಸ ಪಡಿತರ ಚೀಟಿ, ಸಾರಿಗೆ, ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ದೇವಸ್ಥಾನಗಳ ಜೀರ್ಣೋದ್ಧಾರ, ಸರ್ಕಾರಿ ಶಾಲೆ ಹಾಗೂ ಅಂಗನವಾಡಿಗಳ ಅಭಿವೃದ್ಧಿ, ವಿಬಿಜಿ ರಾಮಜಿ, ಪೊಲೀಸ್ ಸೇವೆ, ಖಾಸಗಿ ಉದ್ಯೋಗ, ಕೆರೆ ತುಂಬಿಸುವ ಯೋಜನೆ, ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅರ್ಜಿ ಹಾಗೂ ದೂರುಗಳನ್ನು ಸಲ್ಲಿಸಬಹುದಾಗಿದೆ.

ಸಾರ್ವಜನಿಕರು ಸುಲಭವಾಗಿ ಅರ್ಜಿ ಸಲ್ಲಿಸಲು ಕಾರ್ಯಕ್ರಮದ ಸ್ಥಳದಲ್ಲಿಯೇ ಗ್ರಾಮ ಒನ್ ಮಳಿಗೆ ಕೇಂದ್ರಗಳ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 1902ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

ಪ್ರಜಾಸೇವೆ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಶಾಸಕ ಜಿ. ಹಂಪಯ್ಯ ನಾಯಕ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ಅಹವಾಲುಗಳನ್ನು ಸಲ್ಲಿಸಿ, ಸಂಬಂಧಿಸಿದ ಇಲಾಖೆಗಳ ಮೂಲಕ ಪರಿಹಾರ ಪಡೆದುಕೊಳ್ಳುವಂತೆ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಪ್ರಕಟಣೆಯಲ್ಲಿ ಕೋರಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K